ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಗುರುವಾರ, ೨೦, ಆಗಸ್ಟ್, ೨೦೨೬ (ಶ್ರಾವಣ, ೨೯, ಶಕವರ್ಷ, ೧೯೪೮)	ಸಂಚಿಕೆ ೧೬೨
Volume - 161	BENGALURU, THURSDAY, 20, AUGUST, 2026 (SHRAVANA , 29, SHAKAVARSHA, 1948)	Issue 162

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 7ನೇ ವೇತನ ಆಯೋಗ ಶಿಪಾರಸ್ಸಿನಂತೆ ಸಂಸ್ಥೆಯ ಅಧಿಕಾರಿ/ಸಿಬ್ಬಂದಿಗಳ ವೇತನವನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ: ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ಪತ್ರ ಸಂಖ್ಯೆ: ಕಾಸಂಸು/31/ಆಡಳಿತ/2023-24/123, ದಿನಾಂಕ: 16.08.2024.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ನಿರ್ದೇಶಕರು, ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ, ಬೆಂಗಳೂರು ಇವರು ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯು 09 ನೌಕರರಿಗೆ 7ನೇ ರಾಜ್ಯ ವೇತನ ಆಯೋಗದ ಶಿಪಾರಸ್ಸಿಗಳನ್ನು ರಾಜ್ಯ ಸರ್ಕಾರ ರಾಜ್ಯ ನೌಕರರಿಗೆ ದಿನಾಂಕ: 01.08.2024 ರಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಿರುವ ಹಿನ್ನೆಲೆಯಲ್ಲಿ ರೂ.10/-ನ್ನು ಕಡಿತಗೊಳಿಸಿ, ಮೂಲ ವೇತನವನ್ನು ನೀಡಲು ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ-ಎಲ್‌ಎಡಿ/427/2024,
ಬೆಂಗಳೂರು, ದಿನಾಂಕ: 01.08.2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರಿಗೆ 2024ರ ರಾಜ್ಯ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಆಯಾ ಹುದ್ದೆಯ ವೇತನ ಶ್ರೇಣಿಯಲ್ಲಿ ಕನಿಷ್ಠ ವೇತನವನ್ನು ಮಾಸಿಕ ವೇತನವನ್ನಾಗಿ ಮಂಜೂರು ಮಾಡಲು ಬಾಕಿಯಿರುವ ಪ್ರಕರಣಗಳಲ್ಲಿ, 2018ರ ರಾಜ್ಯ ಪರಿಷ್ಕೃತ ವೇತನ ಶ್ರೇಣಿಗಳಲ್ಲಿನ ಆಯಾ ಹುದ್ದೆಯ ಕನಿಷ್ಠ ವೇತನವನ್ನು ಪಡೆದ ನೌಕರರಿಗೆ 2024ರ ರಾಜ್ಯ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಅದೇ ಸೌಲಭ್ಯವನ್ನು ದಿನಾಂಕ:01.07.2026 ರಿಂದ ಭವಿಷ್ಯಾವರ್ತಿಯಾಗಿ ಮಂಜೂರಾತಿ ನೀಡಿದೆ. ಸದರಿಯವರ ಗುತ್ತಿಗೆ ಅವದಿ ಮುಕ್ತಾಯವಾದ

ನಂತರ ಈ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತತ್ಸಂಬಂದ ನಿಯಮಾನುಸಾರ ನಿಗದಿತ ವೇತನದ ಮೇರೆಗೆ ಭರ್ತಿ ಮಾಡುಮಂತೆಯೂ ತಿಳಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 452 ವೆಚ್ಚ-10/2024(e), ದಿನಾಂಕ: 18.06.2026ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ
ಇಲಾಖೆ (ಆಡಳಿತ-2)

PR-302

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ ಜಿ.ಐ.ಎಸ್ ಆಧಾರಿತ ತಾತ್ಕಾಲಿಕ ಮಹಾಯೋಜನೆ (ಪ-II) 2041 ಕ್ಕೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 105 ಬೆಂರೂಪ್ರಾ 2009, ದಿನಾಂಕ:19.06.2009.
2. ಆಯುಕ್ತರು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರವರ ಪತ್ರ ಸಂಖ್ಯೆ: ಚಿನಅಪ್ರಾ/ನ.ಯೋ/ಅಮಯೋ/2025-26/338, ದಿನಾಂಕ:20.08.2025.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: DTCP-TECHOMP/10/2025, ದಿನಾಂಕ:04.10.2025.

****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶದಲ್ಲಿ ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-I) ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ ಪತ್ರದಲ್ಲಿ ಆಯುಕ್ತರು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರ, ಚಿತ್ರದುರ್ಗ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 9 ರಿಂದ 12 ರನ್ವಯ ಚಿತ್ರದುರ್ಗ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ (ಪ-III) (ತಾತ್ಕಾಲಿಕ) ಯನ್ನು ಸಿದ್ಧಪಡಿಸಿ ಸದರಿ ಕಾಯ್ದೆಯ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆ ಕೋರಿ ಆಯುಕ್ತರು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರ ರವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಏಕ ಕಡತದಲ್ಲಿ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರು ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2011ರಲ್ಲಿ 1,45,853 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2041ನೇ ಇಸವಿಗೆ ಜನಸಂಖ್ಯೆಯು ಸುಮಾರು 3,00,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 12779.47 ಹೆಕ್ಟೇರ್ ವಿಸ್ತೀರ್ಣ ಇರುತ್ತದೆ. ಸದರಿ ವಿಸ್ತೀರ್ಣದಲ್ಲಿ 3989.88 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ, ಚಿತ್ರದುರ್ಗ ಪಟ್ಟಣದ ಜನಸಂಖ್ಯೆ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿನುಗುಣವಾಗಿ ಹಾಗೂ ಮಹಾಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಬೆಳವಣಿಗೆಗೆ, ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾಯೋಜನೆ ತಯಾರಿಸಲಾಗಿದೆ.

ಪಟ್ಟಣದ ಯೋಜಿತ ಬೆಳವಣಿಗೆಗಾಗಿ ನಗರೀಕರಣ ಎಲ್ಲೆ ಎಂದು ಪ್ರಸ್ತಾಪಿಸಿರುವ 3989.88 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1935.26 ಹೆಕ್ಟೇರ್ (ಶೇ.48.50), ವಾಣಿಜ್ಯಕ್ಕಾಗಿ 191.14 ಹೆಕ್ಟೇರ್ (ಶೇ.4.79), ಕೈಗಾರಿಕೆಗಾಗಿ 120.06 ಹೆಕ್ಟೇರ್, (ಶೇ 3.02), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 403.13 ಹೆಕ್ಟೇರ್, (ಶೇ 10.10), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 585.43 ಹೆಕ್ಟೇರ್ (ಶೇ 14.67), ಸರ್ವಾಜನಿಕ ಉಪಯುಕ್ತತೆಗಾಗಿ 16.09 ಹೆಕ್ಟೇರ್, (ಶೇ 0.40), ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 738.77 ಹೆಕ್ಟೇರ್ (ಶೇ. 18.52) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ.

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ (ಜಿ.ಐ.ಎಸ್ ಆಧಾರಿತ) ಮಹಾಯೋಜನೆ (ಪ-II) (ತಾತ್ಕಾಲಿಕ) 2041ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ

ಸರ್ಕಾರದ ಆದೇಶ ಸಂಖ್ಯೆ: ನಅಇ 316 ಬೆಂರೂಪ್ರಾ 2025,
ಬೆಂಗಳೂರು, ದಿನಾಂಕ: 14.08.2026

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಚಿತ್ರದುರ್ಗ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ (ಜಿ.ಐ.ಎಸ್ ಆಧಾರಿತ) ಮಹಾಯೋಜನೆ (ಪ-II) (ತಾತ್ಕಾಲಿಕ) 2041ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(1) ರನ್ವಯ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

PR-303

ಕರ್ನಾಟಕಸರ್ಕಾರದನಡವಳಿಗಳು

ವಿಷಯ: ಸಿಂಧನೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ GIS ಆಧಾರಿತ ಮಹಾಯೋಜನೆ (ಪ-II) ಗೆ ತಾತ್ಕಾಲಿಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ 365 ಟಿಟಿಪಿ 1996, ಬೆಂಗಳೂರು, ದಿನಾಂಕ: 02.09.1996.
2. ಆಯುಕ್ತರು, ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರ, ಸಿಂಧನೂರು, ಇವರ ಪತ್ರ ಸಂಖ್ಯೆ:ನಅಪ್ರಾಸಿಂ/ಮಾಸ್ಟರ್ ಪ್ಲಾನ್/2026-27/258, ದಿನಾಂಕ: 03.07.2026.
3. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಕಡತ ಸಂಖ್ಯೆ: DTCP-62-LPA-2017-18 (3781), ದಿನಾಂಕ:08.07.2026.

****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಅಧಿಸೂಚನೆಯನ್ವಯ ಸಿಂಧನೂರು ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರನ್ವಯ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ ಪತ್ರದಲ್ಲಿ ಸಿಂಧನೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿರುವ ಮಹಾಯೋಜನೆ (ಪ-II) ನಕ್ಷೆ ಮತ್ತು ವರದಿಯನ್ನು ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆ ಕೋರಿ ಆಯುಕ್ತರು, ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಏಕ ಕಡತ ಪ್ರಸ್ತಾವನೆಯಲ್ಲಿ, ಸಿಂಧನೂರು ಪಟ್ಟಣದ ಜನಸಂಖ್ಯೆಯು 2011 ರಲ್ಲಿ 75837 ಇದ್ದು 2041 ನೇ ಇಸವಿಗೆ ಸುಮಾರು 250000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 21370.00 ಹೆಕ್ಟೇರ್ ವಿಸ್ತೀರ್ಣದಲ್ಲಿ 3280.12 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಸಿಂಧನೂರು ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಮಹಾಯೋಜನೆ ಸಿದ್ಧಪಡಿಸಿದ್ದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 9 ರಿಂದ 12 ರವರೆಗೆ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 3280.12 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1784.89 ಹೆಕ್ಟೇರ್ (ಶೇ.54.42), ವಾಣಿಜ್ಯಕ್ಕಾಗಿ 214.21 ಹೆಕ್ಟೇರ್ (ಶೇ.06.53), ಕೈಗಾರಿಕೆಗಾಗಿ 165.92 ಹೆಕ್ಟೇರ್ (ಶೇ.05.06), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 193.16 ಹೆಕ್ಟೇರ್, (ಶೇ.05.89), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 342.05 ಹೆಕ್ಟೇರ್ (ಶೇ.10.43), ಸಾರ್ವಜನಿಕ ಉಪಯುಕ್ತತೆಗಾಗಿ 21.52 ಹೆಕ್ಟೇರ್, (ಶೇ.0.66), ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 558.37 ಹೆಕ್ಟೇರ್ (ಶೇ.17.01) ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ.

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆ (ಪ-II) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ನಿಯಮಾನುಸಾರ ಪರಿಶೀಲಿಸಲಾಗಿದೆ. ಅದ್ದರಿಂದ ಈ ಕೆಳಕಂಡ ಆದೇಶ.

ಸರ್ಕಾರದಆದೇಶ ಸಂಖ್ಯೆ: ನಅಇ 191 ಗುಅಪ್ರಾ 2026(ಇ),
ಬೆಂಗಳೂರು, ದಿನಾಂಕ:11.08.2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಿಂಧನೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ GIS ಆಧಾರಿತ ಮಹಾಯೋಜನೆ (ಪ-II) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ (ಪ-II) ಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ)
ಸರ್ಕಾರದಅಧೀನಕಾರ್ಯದರ್ಶಿ
(ಅಭಿವೃದ್ಧಿ ಪ್ರಾಧಿಕಾರ & ನಯೋಸೇ)
ನಗರಾಭಿವೃದ್ಧಿಇಲಾಖೆ.

PR-304

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 136 ಬಿಎಸ್ಐ 2024

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:14.08.2026

ಸುತ್ತೋಲೆ

ಸರ್ಕಾರದ ಆದೇಶ ಸಂ: ಕಂಇ 136 ಬಿಎಸ್ಐ 2024 ದಿನಾಂಕ: 06.02.2026ರ ಆದೇಶದಲ್ಲಿ ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಸಹಾಯಕರುಗಳು ಸೇವೆಯಿಂದ ವಯೋನಿವೃತ್ತಿ ಹೊಂದಿದ ಮತ್ತು ಸೇವೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಮರಣ ಹೊಂದಿದ ಗ್ರಾಮ ಸಹಾಯಕರು/ಅವರ ಕುಟುಂಬದವರು ತಮ್ಮ ಜೀವನದ ಸಂಧ್ಯಾಕಾಲದಲ್ಲಿ ಗೌರವಯುತ ನಿವೃತ್ತಿ ಜೀವನವನ್ನು ನಡೆಸಲು, ಒಂದು ಬಾರಿಗೆ ರೂ. 5.00 ಲಕ್ಷಗಳ ಇಡಿಗಂಟನ್ನು ಮಂಜೂರು ಮಾಡಿ ಆದೇಶಿಸಿದೆ.

ಸೇವೆಯಲ್ಲಿದ್ದಾಗ ಅಕಾಲಿಕ ಮರಣ ಹೊಂದಿದ/ವಯೋನಿವೃತ್ತಿ ಹೊಂದುವ ಗ್ರಾಮ ಸಹಾಯಕರಿಗೆ ರೂ. 5 ಲಕ್ಷಗಳ ಇಡಿಗಂಟನ್ನು ಮಂಜೂರು ಮಾಡುವ ಪೂರ್ವದಲ್ಲಿ ಈ ಕೆಳಕಂಡ ಅಂಶಗಳನ್ನು ಅನುಸರಿಸಿ ಇಡಿಗಂಟು ಪಾವತಿಸಲು ಕ್ರಮವಹಿಸುವುದು.

1. ಗ್ರಾಮ ಸಹಾಯಕರು ಸರ್ಕಾರದಿಂದ ಮಂಜೂರಾದ ಹುದ್ದೆಗೆ ಎದುರಾಗಿ ಸಕ್ಷಮ ಪ್ರಾಧಿಕಾರದಿಂದ ನೇಮಕಾತಿ ಹೊಂದಿಸೇವೆ ಸಲ್ಲಿಸಿರಬೇಕು.

2. ಸೇವೆಯಿಂದ ವಯೋನಿವೃತ್ತಿ ಹೊಂದಿದ ಗ್ರಾಮ ಸಹಾಯಕರು ಅಥವಾ ಸೇವೆಯಲ್ಲಿರುವಾಗ ಮರಣ ಹೊಂದಿದ ಗ್ರಾಮ ಸಹಾಯಕರ ಕಾನೂನುಬದ್ಧ ವಾರಸುದಾರರು ಅನುಬಂಧ-1ರಲ್ಲಿ ನಮೂದಿಸಿರುವ ದಾಖಲೆಗಳೊಂದಿಗೆ ಸಂಬಂಧಪಟ್ಟ ತಹಶೀಲ್ದಾರರಿಗೆ ಅರ್ಜಿ ಸಲ್ಲಿಸತಕ್ಕದ್ದು.

3. ಅರ್ಜಿ ಸ್ವೀಕರಿಸಿದ ನಂತರ ಸಂಬಂಧಪಟ್ಟ ಕಂದಾಯ ನಿರೀಕ್ಷಕರು/ಗ್ರಾಮ ಆಡಳಿತ ಅಧಿಕಾರಿಗಳು ಸೇವಾ ದಾಖಲೆಗಳು, ನೇಮಕಾತಿ ಆದೇಶ ಹಾಗೂ ಇತರ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ ವಾಸ್ತವಾಂಶಗಳ ವರದಿಯನ್ನು ತಹಶೀಲ್ದಾರರಿಗೆ ಸಲ್ಲಿಸತಕ್ಕದ್ದು.

4. ತಹಶೀಲ್ದಾರರು ವರದಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ, ಸರ್ಕಾರದ ಆದೇಶದಲ್ಲಿ ನಿಗದಿಪಡಿಸಿರುವ ಅರ್ಹತಾ ಷರತ್ತುಗಳು ಪೂರೈಸಲ್ಪಟ್ಟಿರುವುದನ್ನು ದೃಢೀಕರಿಸಿಕೊಂಡ ನಂತರ ಅನುಬಂಧ-2ರ ನಮೂನೆಯಲ್ಲಿ ತಮ್ಮ ಸ್ಪಷ್ಟ ಅಭಿಪ್ರಾಯ ಮತ್ತು ಶಿಫಾರಸಿನೊಂದಿಗೆ ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

5. ಜಿಲ್ಲಾಧಿಕಾರಿರವರು ಪ್ರಸ್ತಾವನೆಯನ್ನು ಪರಿಶೀಲಿಸಿ ಇಡಿಗಂಟಿನ ಅನುದಾನವನ್ನು ಬಿಡುಗಡೆ ಮಾಡುವ ಪೂರ್ವದಲ್ಲಿ ಅಂಶ(6)ರಲ್ಲಿ ಪ್ರಸ್ತಾಪಿಸಿರುವಂತೆ ಗ್ರಾಮ ಸಹಾಯಕರ **DATABASE** ನಲ್ಲಿ ಇಡಿಗಂಟು **ಪಾವತಿಯಾಗದಿರುವುದನ್ನು** ಖಚಿತಪಡಿಸಿಕೊಂಡು ಇಡಿಗಂಟು ಬಿಡುಗಡೆ ಮಾಡಲು ಕ್ರಮವಹಿಸತಕ್ಕದ್ದು.

6. ಗ್ರಾಮ ಸಹಾಯಕರು ಸರ್ಕಾರಿ ನೌಕರರಾಗಿರದ ಹಿನ್ನೆಲೆಯಲ್ಲಿ ಇವರ ಸೇವಾ ವಿವರಗಳನ್ನು HRMS ತಂತ್ರಾಂಶದಲ್ಲಿ ನಮೂದಿಸಲು ಅವಕಾಶವಿರುವುದಿಲ್ಲ ಈ ಹಿನ್ನೆಲೆಯಲ್ಲಿ ಪ್ರತಿಯೊಂದು ಜಿಲ್ಲೆಯಲ್ಲಿ ಮಂಜೂರಾದ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಸಹಾಯಕರುಗಳ ವಿವರಗಳನ್ನು ಒಳಗೊಂಡ DATABASE ಸಿದ್ಧಪಡಿಸಿಕೊಂಡು, ಒಮ್ಮೆ ಇಡಿಗಂಟು ಸೌಲಭ್ಯ ಪಾವತಿಯಾದ ಸಂದರ್ಭದಲ್ಲಿ ಪಾವತಿಯಾಗಿರುವ ಮಾಹಿತಿಯನ್ನು ಸದರಿ DATABASE ನಲ್ಲಿ Update ಮಾಡತಕ್ಕದ್ದು. ಜಿಲ್ಲಾ ಮಟ್ಟದಲ್ಲಿ ಡೇಟಾಬೇಸ್ ನಿಖರತೆ, ಸಮಗ್ರತೆ ಮತ್ತು ಕಾಲಕಾಲಕ್ಕೆ ನವೀಕರಣವಾಗುತ್ತಿರುವುದನ್ನು ಖಚಿತಪಡಿಸುವ ಜವಾಬ್ದಾರಿ ಸಂಬಂಧಪಟ್ಟ ಅಧಿಕಾರಿಗಳದ್ದಾಗಿರುತ್ತದೆ.

7. ಯಾವುದೇ ಪ್ರಕರಣದಲ್ಲಿ ಸರ್ಕಾರದ ಆದೇಶದಲ್ಲಿನ ಅರ್ಹತಾ ಷರತ್ತುಗಳು ಪೂರೈಸಲ್ಪಟ್ಟಿಲ್ಲವೆಂದು ಕಂಡುಬಂದಲ್ಲಿ, ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಕಾರಣಗಳನ್ನು ದಾಖಲಿಸಿ ಸೂಕ್ತ ಆದೇಶ (Speaking order) ಹೊರಡಿಸಿ ಅರ್ಜಿದಾರರಿಗೆ ಹಿಂಬರಹ ನೀಡತಕ್ಕದ್ದು.

8. ಇಡಿಗಂಟು ಮಂಜೂರು ಮತ್ತು ಪಾವತಿಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲೆಗಳು, ಪರಿಶೀಲನಾ ವರದಿಗಳು, ಮಂಜೂರಾತಿ ಆದೇಶಗಳು ಮತ್ತು ಪಾವತಿ ವಿವರಗಳನ್ನು ಸಂಬಂಧಪಟ್ಟ ಕಚೇರಿಯಲ್ಲಿ ನಿಯಮಾನುಸಾರ ಸಂರಕ್ಷಿಸತಕ್ಕದ್ದು. ಸದರಿ ಪಾವತಿಗಳು ಲೆಕ್ಕಪರಿಶೋಧನೆಗೆ ಒಳಪಟ್ಟಿರುತ್ತವೆ ಮತ್ತು ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಪಾವತಿಯ ಸಮರ್ಥನೆಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.

(ರಾಜೇಂದರ್ ಕುಮಾರ್ ಕಟಾರಿಯಾ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಕಂದಾಯ ಇಲಾಖೆ.

ಅನುಬಂಧ-1

ವಯೋನಿವೃತ್ತಿ ಹೊಂದಿದ ಗ್ರಾಮ ಸಹಾಯಕರು/ಅಕಾಲಿಕ ಮರಣ ಹೊಂದಿದ ಗ್ರಾಮ ಸಹಾಯಕರ ಕುಟುಂಬದ ಅವಲಂಬಿತರು ಅರ್ಜಿ ನಮೂನೆಯೊಂದಿಗೆ ಅಡಕವಿರಿಸಬೇಕಾದ ಅಗತ್ಯ ದಾಖಲೆಗಳ ಚೆಕ್ ಲಿಸ್ಟ್ ವಿವರ.

ಕ್ರ. ಸಂ	ದಾಖಲೆಗಳ ಪಟ್ಟಿ
1	ಸೇವೆಯಿಂದ ನಿವೃತ್ತಿ ಹೊಂದಿದ/ಮೃತರಾದ ಗ್ರಾಮ ಸಹಾಯಕರ ಹೆಸರು ಮತ್ತು ಖಾಯಂ ವಿಳಾಸ
2	ವಯೋನಿವೃತ್ತಿ / ಮೃತರಾದ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಛೇರಿ
3	ವಯೋನಿವೃತ್ತಿ / ಮೃತ ಹೊಂದಿದ ದಿನಾಂಕ
4	ಮೃತರಾಗಿದ್ದಲ್ಲಿ ಮರಣ ಹೊಂದಿದ ದಿನಾಂಕ (ಮರಣ ಪ್ರಮಾಣ ಪತ್ರದೊಂದಿಗೆ)
5	ಗ್ರಾಮ ಸಹಾಯಕರ ಆಧಾರ್ ಕಾರ್ಡ್
6	ಮೃತ ಹೊಂದಿದ ಸಂದರ್ಭದಲ್ಲಿ ಅರ್ಜಿ ಸಲ್ಲಿಸುವ ಕುಟುಂಬದ ವಾರಸುದಾರರ ಹೆಸರು, ಆಧಾರ್ ಕಾರ್ಡ್ ಮತ್ತು ಕುಟುಂಬದ ವಂಶ ವೃಕ್ಷ.
7	ಮೃತ ಹೊಂದಿದ ಸಂದರ್ಭದಲ್ಲಿ ವಾರಸುದಾರರಿಗೆ ಪಾವತಿಸುವ ಬ್ಯಾಂಕಿನ ವಿವರ (ಪಾಸ್ ಪುಸ್ತಕದ ಜೆರಾಕ್ಸ್ ಹಾಗೂ ಬ್ಯಾಂಕಿನ IFSC Code)
8	ಮತ್ತಿತರ ಪೂರಕ ದಾಖಲೆಗಳು (ಅಗತ್ಯವಿದ್ದಲ್ಲಿ ಮಾತ್ರ)

ಅನುಬಂಧ-2

ಸಂಬಂಧಪಟ್ಟ ತಹಶೀಲ್ದಾರ್ ರವರು ಜಿಲ್ಲಾಧಿಕಾರಿರವರಿಗೆ ಕಳುಹಿಸಬೇಕಾದ ಪ್ರಸ್ತಾವನೆಯ ನಮೂನೆ

ಕ್ರ. ಸಂ	ದಾಖಲೆಗಳ ಪಟ್ಟಿ
1.	ದಿ:06.02.2026 ರಂದು ಹಾಗೂ ನಂತರದಲ್ಲಿ 65 ವರ್ಷ ವಯೋಮಿತಿ ಮೀರಿ ನಿವೃತ್ತಿ ಹೊಂದಿದ ಗ್ರಾಮ ಸಹಾಯಕರ ಹೆಸರು
2.	ಖಾಯಂ ವಿಳಾಸ
3.	ಹುಟ್ಟಿದ ದಿನಾಂಕ: (ಸರ್ಕಾರದಿಂದ ವಿತರಿಸಿರುವ ದಾಖಲೆಯಲ್ಲಿ/ಶಾಲಾ ದಾಖಲೆ ಇರುವಂತೆ)
4.	ಗ್ರಾಮ ಸಹಾಯಕರ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕ
5.	ವಯೋನಿವೃತ್ತಿ/ ಮೃತರಾದ ಸಂದರ್ಭದಲ್ಲಿ ಗ್ರಾಮ ಸಹಾಯಕರು ಕರ್ತವ್ಯ ನಿರ್ವಹಿಸುತ್ತಿದ್ದ ಕಛೇರಿ
6.	65 ವರ್ಷ ವಯೋಮಿತಿ ಮೀರಿದಾಗ ಗ್ರಾಮ ಸಹಾಯಕರ ಕರ್ತವ್ಯದಿಂದ ಬಿಡುಗಡೆ ಮಾಡಿರುವ ಆದೇಶದ ಪ್ರತಿ.
7.	ಮಂಜೂರಾದ ಹುದ್ದೆಯ ಎದುರಿಗೆ ಕರ್ತವ್ಯ ನಿರ್ವಹಿಸಿರುವ ಕುರಿತು ಮಾಹಿತಿ.
8.	ಮೃತ ಹೊಂದಿದ ಸಂದರ್ಭದಲ್ಲಿ ಅರ್ಜಿ ಸಲ್ಲಿಸುವ ಕುಟುಂಬದ ವಾರಸುದಾರರ ಹೆಸರು, ಆಧಾರ್ ಕಾರ್ಡ್ ಮತ್ತು ಕುಟುಂಬದ ವಂಶ ವೃಕ್ಷ

9.	ಸರ್ಕಾರದ ಆದೇಶ ಸಂಖ್ಯೆ: ಕಂಇ 136 ಬಿಎಸ್ಐ 2024, ದಿನಾಂಕ:06.02.2026 ರಂತೆ ಅರ್ಹರಾಗಿದ್ದಲ್ಲಿ ಗ್ರಾಮ ಸಹಾಯಕರು ಸಲ್ಲಿಸಿದ ಸೇವೆಯ ಅವಧಿಗೆ ನಿಗಧಿಪಡಿಸಿರುವ ಇಡಿಗಂಟು ಮೊತ್ತ ರೂ.ಗಳಲ್ಲಿ
10	ತಹಶೀಲ್ದಾರ್ ರವರ ಅಭಿಪ್ರಾಯ ಮತ್ತು ಶಿಫಾರಸ್ಸು

PR-305

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಜಿ.ಆರ್.ಲ್ಯಾವೆಂಡರ್ ಅಪಾರ್ಟ್‌ಮಂಟ್ ಓನರ್ಸ್ ಅಸೋಸಿಯೇಷನ್, ಜೆ.ಪಿ.ನಗರ, ಬೆಂಗಳೂರು ದಕ್ಷಿಣ ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :-
1. ಸರ್ಕಾರದ ಆದೇಶ ಸಂಖ್ಯೆ:ಸಿಒ 46 ಸಿಎಸ್ಆರ್ 2024, ದಿನಾಂಕ:06.11.2025.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಂ.ನಿ/ (ಐಸಿಡಿಪಿ)/ ಸಂ.ಸಂ-02/187/2023-24, ದಿನಾಂಕ:20.07.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಜಿ.ಆರ್.ಲ್ಯಾವೆಂಡರ್ ಅಪಾರ್ಟ್‌ಮಂಟ್ ಓನರ್ಸ್ ಅಸೋಸಿಯೇಷನ್, ಜೆ.ಪಿ.ನಗರ, ಬೆಂಗಳೂರು ದಕ್ಷಿಣ ಈ ಸಂಘಕ್ಕೆ ಶ್ರೀ ಹರೀಶ್‌ಕುಮಾರ್ ಬಿ.ವಿ., ಸಹಕಾರ ಸಂಘಗಳ ಸಹಾಯಕ ನಿಬಂಧಕರು, 3ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆರು ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ ಪತ್ರದಲ್ಲಿ ಜಿ.ಆರ್.ಲ್ಯಾವೆಂಡರ್, ಅಪಾರ್ಟಮೆಂಟ್ ಓನರ್ಸ್ ಅಸೋಸಿಯೇಷನ್, ನಂ.87/8, ಕೊತ್ತನೂರ ದಿನ್ನೆ, 7ನೇ ಹಂತ ಜೆ.ಪಿ.ನಗರ, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ಈ ಸಂಘದ ಆಡಳಿತ ಮಂಡಳಿ ಚುನಾವಣೆ ಸಂಬಂಧ ಅರ್ಹ ಮತ್ತು ಅನರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಿದ್ದು, ಸಂಘದ ಚುನಾವಣೆಯನ್ನು ಜರುಗಿಸಲು ಚುನಾವಣಾಧಿಕಾರಿಯನ್ನು ನೇಮಿಸಲು ಕೋರಲಾಗಿದ್ದು, ಸಂಘದ ಚುನಾವಣೆ ನಡೆಸುವುದು ಬಾಕಿ ಇರುವುದರಿಂದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:06.05.2026ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಜಿ.ಆರ್.ಲ್ಯಾವೆಂಡರ್, ಅಪಾರ್ಟಮೆಂಟ್ ಓನರ್ಸ್ ಅಸೋಸಿಯೇಷನ್, ನಂ.87/8, ಕೊತ್ತನೂರ ದಿನ್ನೆ, 7ನೇ ಹಂತ ಜೆ.ಪಿ.ನಗರ, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯು ದಿನಾಂಕ:05.05.2026 ರಂದು ಮುಕ್ತಾಯವಾಗಿದ್ದು, ಸದರಿ ಸಂಘದ ಚುನಾವಣೆ ನಡೆಸುವುದು ಬಾಕಿ

ಇರುವುದರಿಂದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:06.05.2026 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 46 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ: 13ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಜಿ.ಆರ್.ಲ್ಯಾವೆಂಡರ್, ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ನಂ.87/8, ಕೊತ್ತನೂರ ದಿನ್ನೆ, 7ನೇ ಹಂತ ಜೆ.ಪಿ.ನಗರ, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ಈ ಸಂಘದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:06.05.2026ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಲು ಕ್ರಮವಹಿಸಿ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-306

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ವಿಶ್ವಕರ್ಮ ಸಮಾಜ, ಕಲಬುರಗಿ, ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಸಿಒ 80 ಸಿಎಸ್‌ಆರ್ 2021, ಬೆಂಗಳೂರು, ದಿನಾಂಕ: 06.01.2023, 27.07.2025 ಮತ್ತು 25.09.2025.
2. ಸಹಕಾರ ಸಂಘಗಳ ಉಪ ನಿಬಂಧಕರು, ಕಲಬುರಗಿ ಜಿಲ್ಲೆ ಇವರ ಪತ್ರ ಸಂಖ್ಯೆ; ಉನಿಕ:ವಿ-10:ಸಂ.ಸಂ:2025-26/224, ದಿನಾಂಕ: 06.05.2026.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ವಿಶ್ವಕರ್ಮ ಸಮಾಜ, ಕಾಳಿಕದೇವಿ ಮಂದಿರ, ಸಂತ್ರಾಸವಾಡಿ, ಕಲಬುರಗಿ, ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಕಾಲಕಾಲಕ್ಕೆ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ, ಸಂಘದಲ್ಲಿ ಹಲವಾರು ಆಡಳಿತಾತ್ಮಕ ತೊಂದರೆಗಳು ಇದ್ದ ಕಾರಣ ಸಂಘದ ಹಿಂದಿನ ಪದಾಧಿಕಾರಿಗಳು ನ್ಯಾಯಾಲಯದ ಪ್ರಕರಣ ಸಂಖ್ಯೆ:ಪಿ.ಸಿ.ನಂ.318/2022 ಗುನ್ನಾ ಸಂಖ್ಯೆ:36/2022 ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಕಾರಣ ದಾಖಲಾತಿ ಪ್ರಭಾರ ನೀಡಿರುವುದಿಲ್ಲ. ನಂತರ ಆರಕ್ಷಕ ನಿರೀಕ್ಷಕರು ಎಂ.ಬಿ.ನಗರ ಪೋಲಿಸ್ ಠಾಣೆ ಇವರರು ಪೋಲಿಸ್ ಠಾಣೆ ಗುನ್ನೆ ಸಂಖ್ಯೆ:36/2022 ರಲ್ಲಿ ಅಂತಿಮ ಬಿ ವರದಿ ತಯಾರಿಸಿ ಸಲ್ಲಿಸಿದ್ದು, ಮಾನ್ಯ ನ್ಯಾಯಾಲಯವು ಅಂತಿಮ ಬಿ ವರದಿಯನ್ನು ಒಪ್ಪಿರುತ್ತದೆ. ಆದಕಾರಣ ನ್ಯಾಯಾಲಯ ಪ್ರಕರಣ ಮುಕ್ತಾಯಗೊಂಡ ಕಾರಣ ಸಂಘದ ಹಿಂದಿನ ಪದಾಧಿಕಾರಿಗಳಿಂದ ದಾಖಲಾತಿಗಳನ್ನು ಪಡೆದು ಚುನಾವಣೆ ಜರುಗಿಸಬೇಕಾಗಿದ್ದು, ಸಂಘದ ಆಡಳಿತ ಮಂಡಳಿಗೆ ಚುನಾವಣೆಯನ್ನು ಜರುಗಿಸಲು ಸದಸ್ಯರ ಪಟ್ಟಿ ಸೇರಿದಂತೆ ಇತರೆ ತಯಾರಿಗಳನ್ನು ಮಾಡಿಕೊಳ್ಳಲಾಗುತ್ತಿದ್ದು, ದಿನಾಂಕ:06.01.2026ರಿಂದ 6 ತಿಂಗಳ ಅವಧಿಗೆ ಆಡಳಿತಾಧಿಕಾರಿ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:05.01.2026ಕ್ಕೆ ಮುಕ್ತಾಯಗೊಳ್ಳುವುದರಿಂದ ಸಹಕಾರ ಸಂಘಗಳ ಉಪ ನಿಬಂಧಕರು, ಕಲಬುರಗಿ ಜಿಲ್ಲೆ ಇವರ ಪ್ರಸ್ತಾವನೆಯಂತೆ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:06.01.2026 ರಿಂದ ದಿನಾಂಕ:05.07.2026 ರವರೆಗೆ ಹಾಗೂ ದಿನಾಂಕ: 06.07.2026 ರಿಂದ ಮುಂದಿನ 05.09.2026ರ ವರೆಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಓ 80 ಸಿಎಸ್‌ಆರ್ 2021

ಬೆಂಗಳೂರು, ದಿನಾಂಕ: 07ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ವಿಶ್ವಕರ್ಮ ಸಮಾಜ, ಕಾಳಿಕದೇವಿ ಮಂದಿರ, ಸಂತ್ರಾಸವಾಡಿ, ಕಲಬುರಗಿ, ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:06.01.2026 ರಿಂದ ದಿನಾಂಕ:05.07.2026 ರವರೆಗೆ ಹಾಗೂ ದಿನಾಂಕ:06.07.2026 ರಿಂದ ದಿನಾಂಕ:05.09.2026ರ ವರೆಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಲು ಕ್ರಮವಿಟ್ಟು, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ.ಸಿ. ದಿವಾಕರ್.)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ.

PR-307

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯನ್ನು ಬದಲಾಯಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಸಇ 26 ಸಸಂನೋ 2016, ಬೆಂಗಳೂರು, ದಿನಾಂಕ: 04.05.2020, 06.02.2021, 16.07.2021, 09.02.2022, 18.07.2022, 19.01.2023, 14.06.2023, 16.08.2023, 29.01.2024, 29.04.2024 ಮತ್ತು 20.09.2025.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್‌ಸಿಎಸ್‌ಒಆರ್-2/04/2025, ದಿನಾಂಕ:31.10.2025.
3. ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ ಇವರ ಪತ್ರ ಸಂಖ್ಯೆ:ಡಿಆರ್‌ಬಿ-4/ಎಸ್‌ಒಆರ್/ಅ.ಅ./196/2024-25, ದಿನಾಂಕ:20.05.2026.

****

ಪ್ರಸ್ತಾವನೆ:

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿದ್ದು, ನಂತರ ಕಾಲಕಾಲಕ್ಕೆ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಲಾಗಿತ್ತು. ಸರ್ಕಾರದ ದಿನಾಂಕ:20.09.2025ರ ಆದೇಶದಲ್ಲಿ ಹಿಂದಿನ ಆಡಳಿತಾಧಿಕಾರಿಯಾಗಿದ್ದ ಶ್ರೀ ಕಿಶೋರ್‌ಕುಮಾರ್ ಜೋಷಿ, ಸಹಕಾರ ಸಂಘಗಳ ಉಪ ನಿಬಂಧಕರು, ಇವರನ್ನು ಬದಲಾಯಿಸಿ, ಶ್ರೀ ಬಾಬುರೆಡ್ಡಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಿಬ್ಬಂದಿ ಶಾಖೆ, ಸಹಕಾರ ಸಂಘಗಳ ನಿಬಂಧಕರ ಕಛೇರಿ, ಬೆಂಗಳೂರು ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಶ್ರೀ ಬಾಬುರೆಡ್ಡಿ ರವರು ತಾವು ಸಹಕಾರ ಸಂಘಗಳ ಸಹಾಯಕ ನಿಬಂಧಕರು (ಸಿಬ್ಬಂದಿ ಶಾಖೆ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ಈ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇದಲ್ಲದೇ ಇದೇ ಕಛೇರಿಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು (ಬಳಕೆ ಮತ್ತು ಮಾರಾಟ) ಈ ಹುದ್ದೆಯ ಅಧಿಕ ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಎರಡೂ ಶಾಖೆಗಳಲ್ಲಿ ತೀವ್ರ ಕೆಲಸದ ಒತ್ತಡವಿರುತ್ತದೆಂದು ತಿಳಿಸಿರುತ್ತಾರೆ. ತಾವು ಪ್ರಸ್ತುತ ಬಲಗಾಲು ಮೊಣಕಾಲು ಚಿಪ್ಪು ಸವೆತದಿಂದ ಬಳಲುತ್ತಿದ್ದು, ಹೆಚ್ಚಾಗಿ ಓಡಾಡಿಕೊಂಡು ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಮತ್ತು ಮೆಟ್ಟಿಲುಗಳನ್ನು ಹತ್ತಬಾರದೆಂದು ವೈದ್ಯರು ಸಲಹೆ ನೀಡಿರುತ್ತಾರೆಂದು ಹಾಗೂ ಈ ಸಂಬಂಧ ವೈದ್ಯಕೀಯ ಚಿಕಿತ್ಸೆ ಪಡೆದುಕೊಳ್ಳುತ್ತಿರುವುದಾಗಿ ತಿಳಿಸಿ, ಸದರಿ ಅಸೋಸಿಯೇಷನ್‌ನ ಆಡಳಿತಾಧಿಕಾರಿ ಹುದ್ದೆಯಿಂದ ಬದಲಾಯಿಸಿ ಬೇರೊಬ್ಬರನ್ನು ನೇಮಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(3)ರ ಪತ್ರದಲ್ಲಿ ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯಾಗಿದ್ದ ಶ್ರೀ ಕಿಶೋರ್‌ಕುಮಾರ್ ಜೋಶಿ, ಸಹಕಾರ ಸಂಘಗಳ ಉಪ ನಿಬಂಧಕರು, ಇವರನ್ನು ಕೋಲಾರ ಜಿಲ್ಲೆಗೆ ವರ್ಗಾಯಿಸಿರುವುದರಿಂದ ಸದರಿ ಸಂಘಕ್ಕೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲು ಕೋರಿರುತ್ತಾರೆ.

ಪ್ರಸ್ತಾವೆಯಲ್ಲಿನ ಅಂಶಗಳನ್ನು ಪರಿಶೀಲಿಸಿ, ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರು ಈ ಸಂಘದ ವತಿಯಿಂದ ನಿವೇಶನ ಹಂಚಿಕೆಯಾಗದೆ ವಂಚಿತರಾಗಿರುವ ಅರ್ಹ ಸದಸ್ಯರಿಗೆ ಪರಿಣಾಮಕಾರಿಯಾಗಿ ನ್ಯಾಯ ಒದಗಿಸುವ ದೃಷ್ಟಿಯಿಂದ ಹಾಗೂ ಸಾರ್ವಜನಿಕ ಮತ್ತು ಸಂಘದ ಸದಸ್ಯರ ಹಿತಾದೃಷ್ಟಿಯಿಂದ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27(ಎ) ರಡಿಯಲ್ಲಿ ಪ್ರಸ್ತುತ ಇರುವ ಆಡಳಿತಾಧಿಕಾರಿ ಶ್ರೀ ಕಿಶೋರ್‌ಕುಮಾರ್ ಜೋಷಿ, ಸಹಕಾರ ಸಂಘಗಳ ಉಪ ನಿಬಂಧಕರು ಇವರನ್ನು ಬದಲಾಯಿಸಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ, ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 83 ಸಿಎಸ್‌ಆರ್ 2025,
ಬೆಂಗಳೂರು, ದಿನಾಂಕ: 13ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ ಕಲಂ 27(ಎ) ರನ್ವಯ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯಾದ ಶ್ರೀ ಕಿಶೋರ್‌ಕುಮಾರ್ ಜೋಷಿ, ಸಹಕಾರ ಸಂಘಗಳ ಉಪ ನಿಬಂಧಕರು ಇವರನ್ನು ಬದಲಾಯಿಸಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-308

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ(ರಿ), ಬೆಂಗಳೂರು ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-
1. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಕಛೇರಿಯ ಪತ್ರ ಸಂಖ್ಯೆ:ಆರ್‌ಸಿಎಸ್/ಸಂಘಸಂಸ್ಥೆ-02/289/2025-26, ದಿನಾಂಕ:16.03.2026.
2. ಸರ್ಕಾರದ ನೋಟೀಸ್ ಸಂಖ್ಯೆ:ಸಿಒ 95 ಸಿಎಸ್‌ಆರ್ 2026, ದಿನಾಂಕ:27.04.2026.
3. ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ(ರಿ), ಬೆಂಗಳೂರು ಇವರ ಸಮಜಾಯಿಷಿ ದಿನಾಂಕ:11.05.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರದಲ್ಲಿ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲೋರ್ಸ್ಕರ್ ಮುಖ್ಯರಸ್ತೆ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-21, ಈ ಸಂಘದ ವಿರುದ್ಧ ಸ್ವೀಕೃತವಾದ ದೂರು ಅರ್ಜಿಗಳ ಕುರಿತು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ

ಕಲಂ 25 ರಡಿ ವಿಚಾರಣೆ ಜರುಗಿಸಲು ಶ್ರೀ ಮುರಳಿಧರ, ಸಹಕಾರ ಅಭಿವೃದ್ಧಿ ಅಧಿಕಾರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು, ವಿಚಾರಣಾಧಿಕಾರಿಗಳು ಒಟ್ಟು 07 ಅಂಶಗಳ ಕುರಿತು ವಿಚಾರಣೆಯನ್ನು ಜರುಗಿಸಿ ವಿಚಾರಣಾ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ 07 ಆರೋಪಗಳು ಸಾಬೀತಾಗಿರುವುದರಿಂದ ಹಾಗೂ ಸಂಘದ ಕಾರ್ಯಕಾರಿ ಮಂಡಲಿಯ ಅವಧಿಯು ಮಾರ್ಚ್ 2025ಕ್ಕೆ ಮುಕ್ತಾಯವಾಗಿರುವುದರಿಂದ ಹಾಗೂ ಇಲ್ಲಿಯವರೆಗೆ ಸಂಘಕ್ಕೆ ಚುನಾವಣೆ ಜರುಗಿಸಲು ಕ್ರಮವಿಡದೆ ಬೈಲಾ ಉಲ್ಲಂಘನೆ ಮಾಡಿರುವುದರಿಂದ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲೋರ್ಸ್ಕರ್ ಮುಖ್ಯರಸ್ತೆ, ಹೊಸ ಸೇತುವೆ ಹತ್ತಿರ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-560021 ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಪ್ರಸ್ತಾವೆಯನ್ನು ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ(2) ರನ್ವಯ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲೋರ್ಸ್ಕರ್ ಮುಖ್ಯರಸ್ತೆ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-21, ಈ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರ ಕಲಂ 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಿಸಬಾರದು? ಎಂಬ ಬಗ್ಗೆ ಕಾರಣ ಕೇಳಿ ನೋಟೀಸ್ ನೀಡಿ, ಲಿಖಿತ ಸಮಜಾಯಿಷಿಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ಸಂಘದ ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿ, ದೇವಸ್ಥಾನದ ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸೂಕ್ತ ರೀತಿಯಲ್ಲಿ ಕಾರ್ಯ ನಿರ್ವಹಿಸಲು ಚುನಾಯಿತ ಆಡಳಿತ ಮಂಡಳಿ ಬೇಕಾಗಿದ್ದು, ಕಾರ್ಯಕಾರಿ ಮಂಡಳಿ ಚುನಾವಣೆಯನ್ನು ನಡೆಸಲು ಚುನಾವಣಾಧಿಕಾರಿಯನ್ನು ನೇಮಿಸಲು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಸಂಘದ ವಿರುದ್ಧದ ದೂರಿಗೆ ಸಂಬಂಧಿಸಿದಂತೆ ಕಲಂ-25ರಡಿ ನಡೆಸಿದ ವಿಚಾರಣೆಯಲ್ಲಿನ 7 ಅಂಶಗಳು ಸಾಬೀತಾಗಿರುವುದರಿಂದ ಹಾಗೂ ಸಂಘದ ಕಾರ್ಯಕಾರಿ ಮಂಡಲಿಯ ಅವಧಿಯು ಮಾರ್ಚ್-2025ಕ್ಕೆ ಮುಕ್ತಾಯವಾಗಿರುವುದರಿಂದ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲೋರ್ಸ್ಕರ್ ಮುಖ್ಯರಸ್ತೆ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-21, ಈ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವುದು ಸೂಕ್ತವೆಂದು ಪರಿಗಣಿಸಿ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲೋರ್ಸ್ಕರ್ ಮುಖ್ಯರಸ್ತೆ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-21, ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಶ್ರೀ ಶಶಿಧರ ದೊಡ್ಡಪ್ಪ ಪ್ಯಾಟಿಸಿಂಗಿ, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 95 ಸಿಎಸ್‌ಆರ್ 2026

ಬೆಂಗಳೂರು, ದಿನಾಂಕ: 13ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಶ್ರೀ ಶಕ್ತಿದೇವಿ ಕರುಮಾರಿ ಅಮ್ಮನ ಭಕ್ತ ಮಂಡಲಿ, ಕಿಲ್ಕೋರ್ಸ್ಕರ್ ಮುಖ್ಯರಸ್ತೆ, ಮಿಲ್ಕ್ ಕಾಲೋನಿ, ಸುಬ್ರಮಣ್ಯನಗರ, ಬೆಂಗಳೂರು-21, ಈ ಸಂಘಕ್ಕೆ ಶ್ರೀ ಶಶಿಧರ ದೊಡ್ಡಪ್ಪ ಪ್ಯಾಟಿಸಿಂಗಿ, ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಉಪ ನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-309

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ (ರಿ), ಬೆಂಗಳೂರು ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-

1. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಕಛೇರಿಯ ಪತ್ರ ಸಂಖ್ಯೆ:ಆರ್‌ಸಿಎಸ್/ಸಂಘಸಂಸ್ಥೆ-02/281/2025-26, ದಿನಾಂಕ:06.04.2026.
2. ಸರ್ಕಾರದ ನೋಟೀಸ್ ಸಂಖ್ಯೆ:ಸಿಒ 111 ಸಿಎಸ್‌ಆರ್ 2026, ದಿನಾಂಕ:26.05.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರದಲ್ಲಿ ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ, ಬೆಂಗಳೂರು ಈ ಸಂಘದ ವಿರುದ್ಧ ಶ್ರೀ ಮಾಯಣ್ಣ ಹಾಗೂ ಇತರರು ದೂರು ಅರ್ಜಿಯನ್ನು ಸಲ್ಲಿಸಿದ್ದು, ಸದರಿ ದೂರು ಅರ್ಜಿಯಲ್ಲಿ ಸಂಘದ ಆಡಳಿತ ಮಂಡಲಿ ಅವಧಿಯು ಜೂನ್ 2025 ರ ಅಂತ್ಯಕ್ಕೆ ಮುಕ್ತಾಯಗೊಂಡಿದ್ದು, ಸಂಘಕ್ಕೆ ಚುನಾವಣೆಯನ್ನು ಜರುಗಿಸಿರುವುದಿಲ್ಲವೆಂದು ಹಾಗೂ ಹಿಂದಿನ ಆಡಳಿತ ಮಂಡಲಿಯು ಕಾನೂನುಬಾಹಿರವಾಗಿ ಮುಂದುವರೆಯುತ್ತಿರುವುದಾಗಿ ಹಾಗೂ ಸಂಘದ

ಆಡಳಿತ ಮಂಡಲಿಯವರು ಹಣ ದುರುಪಯೋಗ ಮಾಡುತ್ತಿದ್ದು, ಲೆಕ್ಕಪತ್ರವನ್ನು ನಿಯಮಾನುಸಾರ ನಿರ್ವಹಿಸುತ್ತಿರುವುದಿಲ್ಲವೆಂದು ಹಾಗೂ ಸಂಘದ ಹಾಲಿ ಅಧ್ಯಕ್ಷರು ಸ್ವಂತಕ್ಕೆ ಸಂಘವನ್ನು ಬಳಸಿಕೊಳ್ಳುತ್ತಿರುವುದಾಗಿ ತಿಳಿಸಿ, ಸಂಘಕ್ಕೆ ನಿಯಮಾನುಸಾರ ಚುನಾವಣೆಯನ್ನು ಜರುಗಿಸದೆ ಕಾನೂನು ಉಲ್ಲಂಘನೆ ಮಾಡಿರುವುದರಿಂದ ಪ್ರಸ್ತುತ ಆಡಳಿತ ಮಂಡಲಿಯನ್ನು ವಜಾಗೊಳಿಸಿ, ಸಂಘದ ಲೆಕ್ಕಪತ್ರಗಳನ್ನು ಪರಿಶೀಲಿಸಲು ಹಾಗೂ ಅವ್ಯವಹಾರಗಳನ್ನು ಸರಿಪಡಿಸಲು ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲು ಕೋರಿದ್ದು, ಸದರಿ ದೂರನ್ನು ಪರಿಶೀಲಿಸಿ ಸಂಘಕ್ಕೆ ಸ್ಪಷ್ಟೀಕರಣವನ್ನು ಕೋರಲಾಗಿದ್ದು, ಸಂಘದ ಹಿಂದಿನ ಆಡಳಿತ ಮಂಡಲಿಯು ಆರ್ಥಿಕ ಸಮಸ್ಯೆಯಿಂದಾಗಿ ಚುನಾವಣೆಯನ್ನು ಜರುಗಿಸಿರುವುದಿಲ್ಲವೆಂದು, ಶೀಘ್ರದಲ್ಲೇ ಚುನಾವಣೆ ಜರುಗಿಸಲು ಕ್ರಮವಿಡಲಾಗುವುದೆಂದು ಸಂಘದ ಅಧ್ಯಕ್ಷರು ತಿಳಿಸಿರುತ್ತಾರೆ. ದಿನಾಂಕ:26-06-2025 ಕ್ಕೆ ಸಂಘದ ಕಾರ್ಯಕಾರಿ ಸಮಿತಿಯು ಅವಧಿಯು ಮುಕ್ತಾಯವಾಗಿರುವುದರಿಂದ ಹಾಗೂ ಇಲ್ಲಿಯವರೆಗೆ ಸಂಘಕ್ಕೆ ಚುನಾವಣೆ ಜರುಗಿಸಲು ಕ್ರಮವಿಡದೆ ಬೈಲಾ ಉಲ್ಲಂಘನೆ ಮಾಡಿರುವುದರಿಂದ ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ ರಿ. ನಂ.69, 1ನೇ ಮುಖ್ಯರಸ್ತೆ, ನೆಹರೂನಗರ, ಎಸ್.ಸಿ. ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020 ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಕೋರಿ ಪ್ರಸ್ತವನೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ(2) ರನ್ವಯ ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ ರಿ. ನಂ.69, 1ನೇ ಮುಖ್ಯರಸ್ತೆ, ನೆಹರೂನಗರ, ಎಸ್.ಸಿ. ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020 ಈ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರ ಕಲಂ 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಿಸಬಾರದು? ಎಂಬ ಬಗ್ಗೆ ಕಾರಣ ಕೇಳಿ ನೋಟೀಸ್ ನೀಡಿ, ಲಿಖಿತ ಸಮಜಾಯಿಷಿಯನ್ನು ಸಲ್ಲಿಸಲು 7 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ಸರ್ಕಾರದಿಂದ ನೀಡಿರುವ ನೋಟಿಸಿಗೆ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರು ಯಾವುದೇ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಆರೋಪಿತ ಅಂಶಗಳಿಗೆ ದಾಖಲಾತಿಗಳನ್ನು ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡಿದ್ದರೂ ಸಹ ತಮಗೆ ನೀಡಿರುವ ಅವಕಾಶವನ್ನು ಉಪಯೋಗಿಸಿಕೊಳ್ಳಲು ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರು ಆರೋಪಿತ ಅಂಶಗಳಿಗೆ ಸೂಕ್ತ ಹೇಳಿಕೆ ಹಾಗೂ ದಾಖಲಾತಿಗಳನ್ನು ಒದಗಿಸಲು ವಿಫಲರಾಗಿರುವುದರಿಂದ ಸದರಿ ಸಂಘಧ ಕಾರ್ಯಕಾರಿ ಸಮಿತಿಯ ಅವಧಿಯು ದಿನಾಂಕ:26.06.2025ಕ್ಕೆ ಮುಕ್ತಾಯವಾಗಿರುವುದರಿಂದ ಸದರಿ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ ಸಂಘಕ್ಕೆ ಚುನಾವಣೆ ನಡೆಸಿ ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವುದು ಸೂಕ್ತವಾಗಿರುವುದರಿಂದ ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ ರಿ. ನಂ.69, 1ನೇ ಮುಖ್ಯರಸ್ತೆ, ನೆಹರೂನಗರ, ಎಸ್.ಸಿ. ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020 ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಆಡಳಿತಾಧಿಕಾರಿಯನ್ನಾಗಿ ಶ್ರೀ ಎನ್.ಲಕ್ಷ್ಮಣ, ಪತ್ರಾಂಕಿತ ಸಹಾಯಕರು ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿ, ಬೆಂಗಳೂರು ಪ್ರಾಂತ, ಬೆಂಗಳೂರು ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 111 ಸಿಎಸ್‌ಆರ್ 2026

ಬೆಂಗಳೂರು, ದಿನಾಂಕ: 12ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಕರ್ನಾಟಕ ಅಂಧರ ಕ್ಷೇಮಾಭ್ಯುದಯ ಸಂಸ್ಥೆ ರಿ. ನಂ.69, 1ನೇ ಮುಖ್ಯರಸ್ತೆ, ನೆಹರೂನಗರ, ಎಸ್.ಸಿ. ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020 ಈ ಸಂಘಕ್ಕೆ ಶ್ರೀ ಎನ್.ಲಕ್ಷ್ಮಣ, ಪತ್ರಾಂಕಿತ ಸಹಾಯಕರು ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿ, ಬೆಂಗಳೂರು ಪ್ರಾಂತ, ಬೆಂಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-310

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ, ತೊಂಡೇಬಾವಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ಕಲಂ-27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-

1. ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪತ್ರ ಸಂಖ್ಯೆ:ಡಿಆರ್‌ಸಿ/ ಸಂಘಸಂಸ್ಥೆ/ ಸಿಆರ್-03/ 1963-64/2018-19, ದಿನಾಂಕ:22.05.2026.
2. ಸರ್ಕಾರದ ನೋಟೀಸ್ ಸಂಖ್ಯೆ:ಸಿಒ 142 ಸಿಎಸ್‌ಆರ್ 2026, ದಿನಾಂಕ:22.06.2026.
3. ಮುಖ್ಯೋಪಾಧ್ಯಾಯರು, ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ, ತೊಂಡೇಭಾವಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಸಮಜಾಯಿಷಿ ದಿನಾಂಕ:29.06.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಇವರ ಪತ್ರದಲ್ಲಿ ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ, ತೊಂಡೇಬಾವಿ, ಚಿಕ್ಕಬಳ್ಳಾಪುರ ಜಿಲ್ಲೆ, ಈ ಸಂಘದ ಆಡಳಿತ ಮಂಡಳಿ ವಿರುದ್ಧ ಸ್ವೀಕೃತವಾಗಿರುವ ದೂರು ಅರ್ಜಿಗಳನ್ನು ವಿಚಾರಣೆ ಮಾಡಲು ಸಹಕಾರ

ಸಂಘಗಳ ಸಹಾಯಕ ನಿಬಂಧಕರು, ಚಿಕ್ಕಬಳ್ಳಾಪುರ ಉಪ ವಿಭಾಗ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು, ಸದರಿಯವರು ಸಲ್ಲಿಸಿರುವ ಮಧ್ಯಂತರ ವರದಿಯನ್ವಯ ಸಂಘದ ಶಾಲಾ ಶಿಕ್ಷಕರ ಹಿತದೃಷ್ಟಿಯಿಂದ ಲೆಕ್ಕಪತ್ರಗಳನ್ನು ನವೀಕರಣಗೊಳಿಸಲು ತಿಳಿಸಿರುವ ಮೇರೆಗೆ 2018-19 ರಿಂದ 2021-22ನೇ ಸಾಲಿನವರೆಗಿನ ಲೆಕ್ಕಪತ್ರಗಳನ್ನು ನವೀಕರಣ ಮಾಡಲಾಗಿತ್ತು. ಸಂಘದ 2022-23 ಮತ್ತು 2023-24ನೇ ಸಾಲಿನ ಲೆಕ್ಕಪತ್ರಗಳು ಮತ್ತು ಆಡಳಿತ ಮಂಡಲಿ ಸದಸ್ಯರಿಗೆ ಸ್ವೀಕೃತಿ ಪತ್ರವನ್ನು ನೀಡಲಾಗಿದ್ದು, ಈ ಕಛೇರಿಯಿಂದ ಸ್ವೀಕೃತಿ ಪತ್ರ ನೀಡಿದ ನಂತರ, ಸಂಘದ ಕಾರ್ಯಕಾರಿ ಮಂಡಲಿಯನ್ನು ರದ್ದುಪಡಿಸುವಂತೆ ಅನೇಕ ದೂರು ಅರ್ಜಿಗಳು ಸ್ವೀಕೃತವಾಗಿದ್ದರಿಂದ. ನೀಡಲಾಗಿರುವ ಸ್ವೀಕೃತಿ ಮತ್ತು ಅನುಮೋದಿಸಲಾಗಿರುವ ಬೈಲಾ ತಿದ್ದುಪಡಿಯನ್ನು ದಿನಾಂಕ:14.08.2025ರಂದು ರದ್ದುಪಡಿಸಲಾಗಿದ್ದು, ಪ್ರಸ್ತುತ ಸಂಘದಲ್ಲಿ ಯಾವುದೇ ಆಡಳಿತ ಮಂಡಲಿ ಇರುವುದಿಲ್ಲ ಮತ್ತು ಸಂಘವು ಸ್ಥಾಪನೆಗೊಂಡಾಗ ಇದ್ದಂತಹ ಸದಸ್ಯರುಗಳಲ್ಲಿ ಸಂಸ್ಥಾಪಕರು ಮತ್ತು ಕಾರ್ಯದರ್ಶಿ, ಖಜಾಂಚಿ ಹೀಗೆ ಹಲವಾರು ಸದಸ್ಯರು ಮರಣ ಹೊಂದಿರುವುದು ಕಂಡುಬಂದಿರುತ್ತದೆ. ಸಂಘವು ಕೋಟ್ಯಾಂತರ ರೂಪಾಯಿಗಳ ಆಸ್ತಿಯನ್ನು ಹೊಂದಿದ್ದು, ಒಂದು ಜವಾಬ್ದಾರಿಯುತ ಆಡಳಿತ ಮಂಡಲಿ ರಚನೆಯಾಗುವವರೆವಿಗೂ ಮೇಲ್ಕಂಡ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ)ರನ್ವಯ ಆಡಳಿತಾಧಿಕಾರಿಯನ್ನು ನೇಮಕ ಮಾಡಲು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ(2) ರನ್ವಯ ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ ತೊಂಡೆಬಾವಿ ಗೌರಿಬಿದನೂರು ತಾಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರ ಕಲಂ 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಿಸಬಾರದು? ಎಂಬ ಬಗ್ಗೆ ಕಾರಣ ಕೇಳಿ ನೋಟೀಸ್ ನೀಡಿ, ಲಿಖಿತ ಸಮಜಾಯಿಷಿಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ ತೊಂಡೆಬಾವಿ ಗೌರಿಬಿದನೂರು ತಾಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಶಾಲೆಯ ಮುಖ್ಯೋಪಾಧ್ಯಾಯರು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿ, ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ ತೊಂಡೆಬಾವಿ ಗೌರಿಬಿದನೂರು ತಾಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಘವು ಸಹಕಾರ ನೋಂದಣಿ ನಿಯಮಗಳ ಅನ್ವಯ 1962 ರಲ್ಲಿ ನೋಂದಣಿಯಾಗಿ 2022-23 ರ ವರೆಗೆ ಕಾಲ ಕಾಲಕ್ಕೆ ಆಡಳಿತ ಮಂಡಳಿ ಕಾರ್ಯಕಾರಣಿ ಪಟ್ಟಿ ಅನುಮೋದನೆಯಾಗಿ ಅನುಚಾನವಾಗಿ ಸಂಸ್ಥೆಯ ಬೈಲಾ ನಿಯಮಗಳಂತೆ ನಡೆದುಕೊಂಡು ಬಂದಿರುತ್ತದೆ. 2020-2023 ನೇ ಸಾಲಿನಲ್ಲಿ 1962 ರಿಂದ 2022-2023 ರವರೆಗೆ ರಚಿಸಲ್ಪಟ್ಟಿದ್ದ 9 ಜನ ಕಾರ್ಯಕಾರಣಿ ಸಮಿತಿ ಸದಸ್ಯರ ಪೈಕಿ 7 ಜನರನ್ನು ಕೈ ಬಿಟ್ಟು ಹೊಸ ದಾಗಿ 7 ಸದಸ್ಯರನ್ನು ಸೇರಿಸಲ್ಪಟ್ಟ ಮತ್ತು ಅನುಮೋದನೆ ಮಾಡಲ್ಪಟ್ಟ ಕಾರ್ಯಕಾರಣಿ ಸಮಿತಿ ವಿರುದ್ಧ ಮಾನ್ಯ ಸಹಕಾರ ಸಂಘಗಳ ಉಪನಿಬಂಧಕರಲ್ಲಿ ದೂರುಗಳು ದಾಖಲಾಗಿ ಸದರಿಯವರಲ್ಲಿ ವಿಚಾರಣೆಗಳು ನಡೆದು ಅನುಮೋದಿಸಲ್ಪಟ್ಟಿದ್ದ ಕಾರ್ಯಕಾರಿಣಿ ಸಮಿತಿ ಪಟ್ಟಿ ರದ್ದುಪಡಿಸಿರುತ್ತಾರೆ. ನಂತರ ಸಂಸ್ಥೆಯ ಬೈಲಾ ನಿಯಮಗಳಂತೆ ಹಾಗೂ ಚುನಾವಣೆ ಮೂಲಕ ಬೈಲಾ ನಿಯಮಗಳಂತೆ ಚುನಾವಣೆ ನಡೆಸಿ ಇದೇ ಸಂಘದ ಜಂಟಿ ಕಾರ್ಯದರ್ಶಿ ಹಾಗೂ ಮುಖ್ಯ ಶಿಕ್ಷಕಿ ರವರು ಮೊಹರು ಮತ್ತು ಸಹಿಯೊಂದಿಗೆ ಆಡಳಿತ ಮಂಡಳಿ

ಕಾರ್ಯಕಾರಣಿ ಪಟ್ಟಿ ಅನುಮೋದನೆಗೆ ಸಹಕಾರ ಸಂಘಗಳ ಉಪ ನಿಬಂಧಕರವರಿಗೆ ಅನುಮೋದನೆಗಾಗಿ ಸಲ್ಲಿಸಿದ್ದು, ಮತ್ತೆರಡು ಗುಂಪುಗಳಿಂದ 2 ಕಾರ್ಯಕಾರಿಣಿ ಸಮಿತಿ ಪಟ್ಟಿಗಳು ಸಲ್ಲಿಕೆಯಾಗಿರುವುದಾಗಿ ತಿಳಿದಿದೆ. ಶಾಲೆಯಲ್ಲಿ ಪ್ರಸ್ತುತ ಆಡಳಿತ ಮಂಡಳಿ ಇಲ್ಲದೆ ಇರುವುದರಿಂದ ಶಾಲಾ ಮಕ್ಕಳ ಹಿತ ದೃಷ್ಟಿಯಿಂದ ಮತ್ತು ಶಾಲಾ ಶಿಕ್ಷಕರ ಹಿತದೃಷ್ಟಿಯಿಂದ ಅವರುಗಳಿಗೆ ಯಾವುದೇ ತೊಂದರೆಯಾಗದಂತೆ ಸಂಘದ ದಿನ ನಿತ್ಯ ಕಾರ್ಯ ಚಟುವಟಿಕೆಗಳು, ಅಡಚಣೆ ಗಳಿಲ್ಲದೆ ಸುಗಮವಾಗಿ ನಡೆಸಿಕೊಂಡು ಹೋಗಲು ಶಾಲಾ ಮುಖ್ಯೋಪಾಧ್ಯಾಯರಿಗೆ ಸಹಕಾರ ಸಂಘಗಳ ಉಪನಿಬಂಧಕರು ಅಧಿಕಾರವನ್ನು ನೀಡಿರುತ್ತಾರೆ ಆದ್ದರಿಂದ, ಆಡಳಿತಾಧಿಕಾರಿ ನೇಮಿಸುವ ನಿರ್ಣಯವನ್ನು ಕೈಬಿಡಲು ಕೋರಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಸಂಘದ ವಿರುದ್ಧದ ದೂರಿಗೆ ಸಂಬಂಧಿಸಿದಂತೆ ಕಲಂ-25ರಡಿ ನಡೆಸಿದ್ದು, ವಿಚಾರಣಾ ವರದಿಯಲ್ಲಿ ಸಂಘದ ಆಡಳಿತ ಮಂಡಳಿಯು ಸಂಘದ ಕರ್ತವ್ಯಗಳ ನಿರ್ವಹಣೆಯಲ್ಲಿ ವಿಫಲವಾಗಿರುವುದಾಗಿ ತಿಳಿಸಿದ್ದು, ಪ್ರಸ್ತುತ ಆಡಳಿತ ಮಂಡಳಿಯು ಇಲ್ಲದೇ ಇರುವುದರಿಂದ ಸದರಿ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸುವುದು ಸೂಕ್ತವೆಂದು ಪರಿಗಣಿಸಿ ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ, ತೊಂಡೇಬಾವಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಆಡಳಿತಾಧಿಕಾರಿಯನ್ನಾಗಿ ಕ್ಷೇತ್ರ ಶಿಕ್ಷಣಾಧಿಕಾರಿ, ಶಾಲಾ ಶಿಕ್ಷಣ ಇಲಾಖೆ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರನ್ನು ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 142 ಸಿಎಸ್‌ಆರ್ 2026

ಬೆಂಗಳೂರು, ದಿನಾಂಕ: 13ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಶ್ರೀ ಸ್ವಾಮಿ ಶಿವಾನಂದ ಸೇವಾಶ್ರಮ ಪ್ರೌಢಶಾಲೆ, ತೊಂಡೇಬಾವಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಈ ಸಂಘಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ, ಶಾಲಾ ಶಿಕ್ಷಣ ಇಲಾಖೆ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-311

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕನ್ನಡ ಸಾಹಿತ್ಯ ಪರಿಷತ್ತು, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು ಈ ಸಂಘದ ಕಾರ್ಯಕಾರಿ ಸಮಿತಿಯ ಅವಧಿಯು ಮುಕ್ತಾಯವಾಗುತ್ತಿರುವ ಹಿನ್ನಲೆಯಲ್ಲಿ ಚುನಾವಣೆ ನಡೆಸಲು ಮುಖ್ಯ ಚುನಾವಣಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ :-

1. ಆಡಳಿತಾಧಿಕಾರಿ, ಕನ್ನಡ ಸಾಹಿತ್ಯ ಪರಿಷತ್ತು, ಚಾಮರಾಜಪೇಟೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಸಾಪ/ವ್ಯಏ/ಚುನಾವಣೆ-26/2026-27/146, ದಿನಾಂಕ:08.06.2026.
2. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಡತ ಸಂಖ್ಯೆ:KCI-KSN/82/2026-AK-KCI (2222442).
3. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಕಛೇರಿಯ ಏಕ ಕಡತ ಸಂಖ್ಯೆ:RCS/SOR/SOR/24/2026/SOR (2258074).

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಆಡಳಿತಾಧಿಕಾರಿ, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು ಇವರು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು ಇವರಿಗೆ ಬರೆದ ಪತ್ರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿದ್ದ ನಾಡೋಜ ಡಾ. ಮಹೇಶ ಜೋಶಿ ಅವರ ವಿರುದ್ಧ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ 25ರಡಿ ವಿಚಾರಣೆಗೆ ಒಳಪಡಿಸಿರುವ ಆರೋಪಗಳು ಹಣಕಾಸು ದುರುಪಯೋಗಕ್ಕೆ ಸಂಬಂಧಿತವಾಗಿದ್ದು, ದಾಖಲೆಗಳ ಅಲಭ್ಯತೆಯಿಂದ ಹಣ ದುರುಪಯೋಗದ ಪ್ರಮಾಣ / ಸ್ವರೂಪ ತೀರ್ಮಾನಿಸಲು ಸಾಧ್ಯವಾಗುತ್ತಿಲ್ಲದ ಕಾರಣ ವಿಚಾರಣಾವಧಿ ಪೂರ್ಣಗೊಳ್ಳುವವರೆಗೂ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ಮುಖಾಂತರ ಎಲ್ಲ ದಾಖಲೆಗಳನ್ನು ಪಡೆದು ವಿಚಾರಣೆಯನ್ನು ಪೂರ್ಣಗೊಳಿಸಲು ಸಾಧ್ಯವೇ ಹೊರತು ಪ್ರಸ್ತುತ ಆಡಳಿತದಲ್ಲಿರುವ ಸಮಿತಿಯ ಅಸಹಕಾರ ಧೋರಣೆಯಿಂದ ವಿಚಾರಣೆ ಮುಂದುವರೆಸುವುದು ಅಸಾಧ್ಯವೆಂದು ಪರಿಗಣಿಸಿ, ಅಗತ್ಯ ಮಾಹಿತಿ ಮತ್ತು ದಾಖಲೆಗಳನ್ನು ವಿಚಾರಣೆಗೆ ಒದಗಿಸಲು ಅನುವಾಗುವಂತೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರನ್ವಯ ಸರ್ಕಾರದ ಆದೇಶ ಸಂಖ್ಯೆ: ಸಿಒ 281 ಸಿಎಸ್ಆರ್ 2025, ದಿನಾಂಕ:30-09-2025 ರಂದು ಕನ್ನಡ ಸಾಹಿತ್ಯ ಪರಿಷತ್ತಿಗೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿರುತ್ತದೆ. ಕಲಂ 25ರ ವಿಚಾರಣಾ ವರದಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಸಂಪೂರ್ಣ ವ್ಯವಹರಣೆಯು ಕಾನೂನು ಬಾಹಿರವಾಗಿರುವುದು ಸಾಬೀತುಗೊಂಡಿದ್ದು, ಸದರಿ ಆರ್ಥಿಕ ನಷ್ಟಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಆ ಅವಧಿಯಲ್ಲಿನ ಅಧ್ಯಕ್ಷರಾಗಿದ್ದ ನಾಡೋಜ ಡಾ. ಮಹೇಶ ಜೋಶಿಯವರನ್ನು ಜವಾಬ್ದಾರರನ್ನಾಗಿ ಮಾಡಿರುವ ಸಂಬಂಧವಾಗಿ, ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ನೋಂದಣಾಧಿಕಾರಿಗಳು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ರೂ.7,42,88,049-00 (ಏಳು ಕೋಟಿ ನಲವತ್ತೆರಡು ಲಕ್ಷದ ಎಂಬತ್ತೆಂಟು ಸಾವಿರದ ನಲವತ್ತ ಒಂಭತ್ತು ರೂಪಾಯಿ ಮಾತ್ರ)ಗಳ

ಅಧಿಭಾರ (SURCHARGE) ದಾವೆಯನ್ನು ಹೂಡಲಾಗಿದ್ದು, ಸದರಿ ದಾವೆಯು ಚಾಲ್ತಿಯಲ್ಲಿರುತ್ತದೆ. ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಭಾಷೆ, ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಉಳಿಸುವ ಬೆಳೆಸುವ ಕನ್ನಡದ ಆಸ್ಮಿತೆಯನ್ನು ಉಳಿಸುವ ನಿಟ್ಟಿನಲ್ಲಿ ದಿನಾಂಕ:05-05-1915 ರಂದು ನಾಲ್ವಡಿ ಶ್ರೀ ಕೃಷ್ಣರಾಜ ಒಡೆಯರ್ ಅವರ ಅಮೃತ ಹಸ್ತದಿಂದ ಸ್ಥಾಪನೆಯಾಗಿದ್ದು, ಇಂದಿಗೆ ಸುಮಾರು 111 ವರ್ಷಗಳ ಸುದೀರ್ಘ ಇತಿಹಾಸವನ್ನು ಹೊಂದಿದ್ದು, ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜನಪದ ಜೊತೆಗೆ ಕನ್ನಡ-ಕನ್ನಡಿಗ-ಕರ್ನಾಟಕ ಇವುಗಳ ರಕ್ಷಣೆ ಮತ್ತು ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆ ಹಾಗೂ ಎಲ್ಲ ಕನ್ನಡ ಸಂಘ-ಸಂಸ್ಥೆಗಳ ಮಾತೃ ಸಂಸ್ಥೆಯಾಗಿದೆ. 2021ರ ಚುನಾವಣೆಯಲ್ಲಿ ಸ್ಪರ್ಧಿಸಿ ಗೆದ್ದ ಕೇಂದ್ರ ಪರಿಷತ್ತಿನ ಅಧ್ಯಕ್ಷರು, ಜಿಲ್ಲಾ ಅಧ್ಯಕ್ಷರು ಹಾಗೂ ಗಡಿನಾಡು ಘಟಕಗಳ ಅಧ್ಯಕ್ಷರನ್ನೊಳಗೊಂಡ ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಕಾರ್ಯಕಾರಿ ಸಮಿತಿಯು ದಿನಾಂಕ:24-11-2021ರಂದು ಅಸ್ತಿತ್ವಕ್ಕೆ ಬಂದಿದ್ದು, ಅವಧಿಯು ದಿನಾಂಕ:23-11-2026ರಂದು ಮುಕ್ತಾಯವಾಗುತ್ತಿರುವ ಹಿನ್ನೆಲೆಯಲ್ಲಿ, ಕನ್ನಡ ಸಾಹಿತ್ಯ ಪರಿಷತ್ತಿನ 31 ಜಿಲ್ಲೆ, 6 ಗಡಿನಾಡು ಘಟಕಗಳಿಗೆ ಚುನಾವಣೆಯನ್ನು ನಡೆಸಬೇಕಾಗಿರುತ್ತದೆ. ಚುನಾವಣೆಗೆ ಸಂಬಂಧಿಸಿದಂತೆ, ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆ ಸಂಖ್ಯೆ:20 (2) ರಲ್ಲಿ ಈ ಕೆಳಕಂಡಂತೆ ಉಲ್ಲೇಖಿಸಲಾಗಿರುತ್ತದೆ.

> "ಕೇಂದ್ರ ಚುನಾವಣಾಧಿಕಾರಿ ನೇಮಕಾತಿ: "ಕೇಂದ್ರ ಪರಿಷತ್ತಿನ ಅಧ್ಯಕ್ಷರ ಹಾಗೂ ಪರಿಷತ್ತಿನ ಘಟಕಗಳ ಅಧ್ಯಕ್ಷರ ಅಧಿಕಾರಾವಧಿ ಕೊನೆಗೊಳ್ಳುವ ಆರು ತಿಂಗಳ ಮೊದಲೇ ಕೇಂದ್ರ ಪರಿಷತ್ತಿನ ಅಧ್ಯಕ್ಷರು ಕಾರ್ಯಕಾರಿ ಸಮಿತಿಯ ಅನುಮೋದನೆಯೊಂದಿಗೆ, ಕರ್ನಾಟಕ ಸರ್ಕಾರಕ್ಕೆ ಮನವಿ ಸಲ್ಲಿಸಿ, ಆಯಾ ಸ್ಥಾನಗಳಿಗೆ ಚುನಾವಣೆ ನಡೆಸಿಕೊಡಲು ಬೆಂಗಳೂರಿನಲ್ಲಿ ಸೇವೆಯಲ್ಲಿರುವ ಕರ್ನಾಟಕ ಸರ್ಕಾರದ ಹಿರಿಯ ಐ.ಎ.ಎಸ್. ಅಧಿಕಾರಿಯೊಬ್ಬರನ್ನು ಮುಖ್ಯ ಚುನಾವಣಾಧಿಕಾರಿಯನ್ನಾಗಿ ನೇಮಕ ಮಾಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳವರಿಗೆ ವಿನಂತಿಸಿಕೊಳ್ಳತಕ್ಕದ್ದು."

ಚುನಾವಣಾಧಿಕಾರಿಗಳು ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆಯಂತೆ, ಚುನಾವಣಾ ದಿನಾಂಕ ನಿಗದಿಗೊಳಿಸಿ ವೇಳಾಪಟ್ಟಿಯನ್ನು ಪ್ರಕಟಿಸಬೇಕು. ಚುನಾವಣೆ ನಡೆಯುವ 90 ದಿನಗಳ ಮೊದಲು ಮತದಾರರ ಪಟ್ಟಿಯನ್ನು ಜಿಲ್ಲಾ ವಿಭಾಗಗಳಾಗಿ ವಿಂಗಡಿಸಿ ಕೇಂದ್ರ ಪರಿಷತ್ತಿನ ಕಚೇರಿಯಲ್ಲಿಯೂ, ಜಿಲ್ಲಾ / ಗಡಿನಾಡು ಘಟಕಗಳಲ್ಲಿಯೂ ಪ್ರಕಟಿಸಬೇಕು ಎಂಬ ನಿಯಮವಿರುತ್ತದೆ. ಇಡೀ ವಿಶ್ವದಲ್ಲೇ ಅತೀ ಹೆಚ್ಚು ಆಜೀವ ಸದಸ್ಯರನ್ನೊಳಗೊಂಡ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಸಾರಸ್ವತ ಲೋಕದ ಒಂದು ಪ್ರತಿಷ್ಠಿತ ಸಂಸ್ಥೆಯಾಗಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರುಗಳು 31 ಜಿಲ್ಲೆ, 6 ಗಡಿನಾಡು ಘಟಕ ಹಾಗೂ ವಿದೇಶಗಳಲ್ಲಿಯೂ ಸೇರಿದಂತೆ, ಪ್ರಸ್ತುತ 4 ಲಕ್ಷದ 5 ಸಾವಿರಕ್ಕೂ ಅಧಿಕ ಆಜೀವ ಸದಸ್ಯರಿರುವ ಸಾಹಿತ್ಯಕ-ಸಾಂಸ್ಕೃತಿಕ ಸಂಸ್ಥೆಯಾಗಿದೆ. 31 ಜಿಲ್ಲೆಗಳಲ್ಲಿ ಜಿಲ್ಲಾ ಅಧ್ಯಕ್ಷರು, 6 ಗಡಿನಾಡು ಘಟಕಗಳಲ್ಲಿ ಗಡಿನಾಡು ಅಧ್ಯಕ್ಷರುಗಳಿಗೆ ಹಾಗೂ ಸದರಿ ಘಟಕಗಳಲ್ಲಿಯೂ ಕೇಂದ್ರ ಪರಿಷತ್ತಿನ ಅಧ್ಯಕ್ಷರನ್ನು ಚುನಾವಣೆ ಮೂಲಕ ಆಯ್ಕೆ ಮಾಡಬೇಕಾಗಿರುತ್ತದೆ. ಕನ್ನಡ ಸಾಹಿತ್ಯ ಪರಿಷತ್ತು ಅತಿ ಸೂಕ್ಷ್ಮ ಹಾಗೂ ತೀವ್ರ ಪೈಪೋಟಿಯಿಂದ ಕೂಡಿರುವ ಚುನಾವಣೆಯಾಗಿದ್ದು, ಅತ್ಯಂತ

ಪಾರದರ್ಶಕತೆಯಿಂದ ಚುನಾವಣೆಯನ್ನು ನಡೆಸಬೇಕಾಗಿರುವ ಹಿನ್ನೆಲೆಯಲ್ಲಿ, ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಕಾರ್ಯಕಾರಿ ಸಮಿತಿಗೆ ಚುನಾವಣೆಯನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ, ಕನ್ನಡ ಸಾಹಿತ್ಯ ಪರಿಷತ್ತಿನ ಚುನಾವಣೆಯನ್ನು ನಡೆಸಿಕೊಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(2)ರ ಕಡತದಲ್ಲಿ ಆಡಳಿತಾಧಿಕಾರಿ, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು ಇವರು ಕೋರಿರುವಂತೆ ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಕಾರ್ಯಕಾರಿ ಸಮಿತಿಯ ಅವಧಿಯು ದಿನಾಂಕ:23.11.2026ರಂದು ಮುಕ್ತಾಯವಾಗುವುದರಿಂದ ಕನ್ನಡ ಸಾಹಿತ್ಯ ಪರಿಷತ್ತಿಗೆ ಚುನಾವಣೆ ನಡೆಸಲು ಅಗತ್ಯ ಕ್ರಮವಹಿಸಲು ಸಹಕಾರ ಇಲಾಖೆಯನ್ನು ಕೋರಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(3)ರ ಏಕ ಕಡತದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಕಾರ್ಯಕಾರಿ ಸಮಿತಿ ರಚಿಸುವ ಸಲುವಾಗಿ ಚುನಾವಣೆ ನಡೆಸಲು ಮುಖ್ಯ ಚುನಾವಣಾಧಿಕಾರಿಯನ್ನಾಗಿ ಶ್ರೀ ಎ.ಬಿ.ಬಸವರಾಜು, ಐ.ಎ.ಎಸ್., ಜವಳಿ ಅಭಿವೃದ್ಧಿ ಆಯುಕ್ತರು, ಬೆಂಗಳೂರು ಇವರನ್ನು ನೇಮಿಸಬಹುದಾಗಿರುತ್ತದೆ ಎಂದು ಅಭಿಪ್ರಾಯ ನೀಡಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಚುನಾವಣಾಧಿಕಾರಿಗಳು ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆಯಂತೆ, ಚುನಾವಣಾ ದಿನಾಂಕ ನಿಗದಿಗೊಳಿಸಿ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಬೇಕು. ಚುನಾವಣೆ ನಡೆಯುವ 90 ದಿನಗಳ ಮೊದಲು ಮತದಾರರ ಪಟ್ಟಿಯನ್ನು ಜಿಲ್ಲಾ ವಿಭಾಗಗಳಾಗಿ ವಿಂಗಡಿಸಿ ಕೇಂದ್ರ ಪರಿಷತ್ತಿನ ಕಛೇರಿಯಲ್ಲಿಯೂ, ಜಿಲ್ಲಾ / ಗಡಿನಾಡು ಘಟಕಗಳಲ್ಲಿಯೂ ಪ್ರಕಟಿಸಬೇಕಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಸಾರಸ್ವತ ಲೋಕದ, ಪ್ರಸ್ತುತ ವಿಶ್ವದಲ್ಲೇ ಅತೀ ಹೆಚ್ಚು 4 ಲಕ್ಷದ 5 ಸಾವಿರಕ್ಕೂ ಅಧಿಕ ಆಜೀವ ಸದಸ್ಯರಿರುವ ಸಾಹಿತ್ಯಕ-ಸಾಂಸ್ಕೃತಿಕ ಸಂಸ್ಥೆಯಾಗಿದೆ. 31 ಜಿಲ್ಲೆಗಳಲ್ಲಿ ಜಿಲ್ಲಾ ಅಧ್ಯಕ್ಷರು, 6 ಗಡಿನಾಡು ಘಟಕಗಳಲ್ಲಿ ಗಡಿನಾಡು ಅಧ್ಯಕ್ಷರುಗಳಿಗೆ ಹಾಗೂ ಸದರಿ ಘಟಕಗಳಲ್ಲಿಯೂ ಕೇಂದ್ರ ಪರಿಷತ್ತಿನ ಅಧ್ಯಕ್ಷರನ್ನು ಚುನಾವಣೆ ಮೂಲಕ ಆಯ್ಕೆ ಮಾಡಬೇಕಾಗಿರುವುದರಿಂದ ಈ ಚುನಾವಣೆಯನ್ನು ಅತ್ಯಂತ ಪಾರದರ್ಶಕತೆಯಿಂದ ನಡೆಸಬೇಕಾಗಿರುವ ಹಿನ್ನೆಲೆಯಲ್ಲಿ, ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆ ಸಂಖ್ಯೆ:20 (2) ರಲ್ಲಿ ತಿಳಿಸಿರುವಂತೆ ಮುಖ್ಯ ಚುನಾವಣಾಧಿಕಾರಿಯಾಗಿ ಶ್ರೀ ಎ.ಬಿ.ಬಸವರಾಜು, ಐ.ಎ.ಎಸ್., ಜವಳಿ ಅಭಿವೃದ್ಧಿ ಆಯುಕ್ತರು, ಬೆಂಗಳೂರು ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 159 ಸಿಎಸ್‌ಆರ್ 2026

ಬೆಂಗಳೂರು, ದಿನಾಂಕ: 18ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಸಾಹಿತ್ಯ ಪರಿಷತ್ತು, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು, ಈ ಸಂಘದ ನೂತನ ಕಾರ್ಯಕಾರಿ ಸಮಿತಿಯನ್ನು ರಚಿಸುವ ಸಲುವಾಗಿ ಸಂಘದ ಚುನಾವಣೆಯನ್ನು ಅತ್ಯಂತ ಪಾರದರ್ಶಕತೆಯಿಂದ ನಡೆಸಲು ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆ ಸಂಖ್ಯೆ:20(2)ರನ್ವಯ ಮುಖ್ಯ ಚುನಾವಣಾಧಿಕಾರಿಯನ್ನಾಗಿ ಶ್ರೀ ಎ.ಬಿ.ಬಸವರಾಜು, ಐ.ಎ.ಎಸ್., ಜವಳಿ ಅಭಿವೃದ್ಧಿ ಆಯುಕ್ತರು, ಬೆಂಗಳೂರು ಇವರನ್ನು ನೇಮಿಸಿ ಆದೇಶಿಸಿದೆ.

ಮುಖ್ಯ ಚುನಾವಣಾಧಿಕಾರಿಯವರು ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು, ಈ ಸಂಘದ ನೂತನ ಕಾರ್ಯಕಾರಿ ಸಮಿತಿ ರಚಿಸಲು ಕನ್ನಡ ಸಾಹಿತ್ಯ ಪರಿಷತ್ತಿನ ಉಪ ನಿಯಮಗಳ ಅವಕಾಶದ ರೀತ್ಯಾ ಹಾಗೂ ನಿಯಮಾನುಸಾರ ಚುನಾವಣೆ ನಡೆಸತಕ್ಕದ್ದು. ಚುನಾವಣಾ ಪ್ರಕ್ರಿಯೆ ಮುಗಿದ ನಂತರ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-312

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕಲ್ಪತರು ವಿದ್ಯಾಸಂಸ್ಥೆ, ತಿಪಟೂರು, ತುಮಕೂರು ಜಿಲ್ಲೆ ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಕಲಂ-27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ :- ಸಹಕಾರ ಸಂಘಗಳ ಉಪ ನಿಬಂಧಕರು, ತುಮಕೂರು ಜಿಲ್ಲೆ, ತುಮಕೂರು ಇವರ ಪತ್ರ ಸಂಖ್ಯೆ:ಎಸ್.ಒ.ಸಿ:11/1961-62, ದಿನಾಂಕ:14.08.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ಕಲ್ಪತರು ವಿದ್ಯಾಸಂಸ್ಥೆ(ರಿ), ತಿಪಟೂರು, ತುಮಕೂರು ಜಿಲ್ಲೆ ಈ ಸಂಘದ ವಿರುದ್ಧ ಸ್ವೀಕೃತವಾಗಿರುವ ದೂರನ್ನು ಪರಿಶೀಲಿಸಿ ವರದಿ ಸಲ್ಲಿಸಲು ಶ್ರೀ ಮಹಾಂತೇಶಯ್ಯ ಕೆ.ಹೆಚ್., ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ, ಇವರನ್ನು ನೇಮಿಸಿದ್ದು, ಅದರಂತೆ ಸದರಿಯವರು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಕಲ್ಪತರು ವಿದ್ಯಾಸಂಸ್ಥೆಯ ಪದಾಧಿಕಾರಿಗಳ ಸ್ಥಾನಗಳಿಗೆ ದಿನಾಂಕ:21-04-2021 ರಂದು ಚುನಾವಣೆ ನಡೆದಿದ್ದು, 05 ವರ್ಷಗಳ ಅವಧಿ ಮುಕ್ತಾಯವಾಗಿದ್ದರೂ ನಿಯಮಾನುಸಾರ ಸಂಘದ ಚುನಾವಣೆಗೆ ಕ್ರಮವಿಟ್ಟಿರುವುದಿಲ್ಲ. ಅಲ್ಲದೇ ಸಂಘದ ನಿಯಮ ನಿಬಂಧನೆಗಳಿಗೆ ವಿರುದ್ಧವಾಗಿ ಸದಸ್ಯತ್ವವನ್ನು ಮಾಡಿಕೊಂಡು, ನಿಯಮ ನಿಬಂಧನೆಗಳನ್ನು ಉಲ್ಲಂಘಿಸಿರುವ ಬಗ್ಗೆ ವರದಿಯಲ್ಲಿ ತಿಳಿಸಿದ್ದು, ದೂರು ಅರ್ಜಿಯಲ್ಲಿ ಆರೋಪಿಸಿರುವಂತೆ, ಅಧಿಕಾರ ಇಲ್ಲದಿದ್ದರೂ ಸಹ ಟೆಂಡರ್ ಪ್ರಕ್ರಿಯೆ ನಡೆಸಿರುವ ಬಗ್ಗೆ ಹೆಚ್ಚಿನ ತನಿಖೆ ಅಗತ್ಯವಿರುವುದರಿಂದ ಸದರಿ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರ ಕಲಂ 27(ಎ) ಪ್ರಕಾರ ಆಡಳಿತಾಧಿಕಾರಿಯನ್ನು ನೇಮಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿ, ತುಮಕೂರು ಜಿಲ್ಲೆ, ತುಮಕೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಕಲ್ಪತರು ವಿದ್ಯಾಸಂಸ್ಥೆ, ತಿಪಟೂರು, ತುಮಕೂರು ಜಿಲ್ಲೆ ಈ ಸಂಘದ ಆಡಳಿತ ಮಂಡಳಿ ಅವಧಿಯು ದಿನಾಂಕ:21.04.2026ರಂದು ಮುಕ್ತಾಯಗೊಂಡಿದ್ದು, ಕಾರ್ಯಕಾರಿ ಸಮಿತಿಗೆ ಆಡಳಿತದಲ್ಲಿ ಮುಂದುವರೆಯುವ ಅಧಿಕಾರವಿರುವುದಿಲ್ಲ ಆದ್ದರಿಂದ, ಸದರಿ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27 (ಎ) ಆಡಳಿತಾಧಿಕಾರಿಯನ್ನಾಗಿ ತಹಶೀಲ್ದಾರ್, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 187 ಸಿಎಸ್‌ಆರ್ 2026

ಬೆಂಗಳೂರು, ದಿನಾಂಕ: 18ನೇ ಆಗಸ್ಟ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ) ರನ್ವಯ ಕಲ್ಪತರು ವಿದ್ಯಾಸಂಸ್ಥೆ (ರಿ), ತಿಪಟೂರು, ತುಮಕೂರು ಜಿಲ್ಲೆ ಈ ಸಂಘಕ್ಕೆ ತಹಶೀಲ್ದಾರ್, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ನಿಯಮಾನುಸಾರ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-313

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ: ಸಿಒ 207 ಸಿಎಸ್ಆರ್ 2025, ದಿನಾಂಕ:15.09.2025 ಮತ್ತು ತಿದ್ದುಪಡಿ ಆದೇಶ ಸಂಖ್ಯೆ:ಸಿಒ 201 ಸಿಎಸ್ಆರ್ 2025, ದಿನಾಂಕ:30.09.2025.
2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:30610/2025ರಲ್ಲಿ ದಿನಾಂಕ:27.03.2026ರಂದು ನೀಡಿರುವ ಆದೇಶ.
3. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ;ಆರ್.ಸಿ.ಎಸ್:ಐಸಿಡಿಪಿ:ಸಂ.ಸಂ-1:24:ಆ.ನೇ:2025-26, ದಿನಾಂಕ:16.04.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ರ ಆದೇಶ ಮತ್ತು ತಿದ್ದುಪಡಿ ಆದೇಶಗಳಲ್ಲಿ ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಈ ಸಂಘಕ್ಕೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿಕ್ಕಮಗಳೂರು ಇವರನ್ನು 6 ತಿಂಗಳ ಅವಧಿಗೆ ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ತಿದ್ದುಪಡಿ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಸಿಒ 207 ಸಿಎಸ್ಆರ್ 2025, ದಿನಾಂಕ:15.09.2025 ಎಂಬುದರ ಬದಲಾಗಿ ಸಿಒ 201 ಸಿಎಸ್ಆರ್ 2025, ದಿನಾಂಕ:15.09.2025 ಎಂದು ತಿದ್ದಿ ಓದಿಕೊಳ್ಳತಕ್ಕದ್ದು ಎಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ(2)ರಲ್ಲಿ ಮೇಲ್ಕಂಡಂತೆ ಆಡಳಿತಾಧಿಕಾರಿಯನ್ನು ನೇಮಿಸಿರುವ ಕ್ರಮವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:30610/2025ನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:27.3.2026ರಂದು ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

The respondent No.4/Administrator shall, in exercise of powers under Section 27-A of the Act, take immediate steps to secure all relevant records of the Association, including the updated voters' list/membership register;

i. (ii) The Administrator shall issue appropriate notice convening the General Body Meeting strictly in accordance with the bye-laws of the Association;
ii. (iii) The Administrator shall ensure that free and fair elections are conducted for constitution of the governing body;
iii. (iv) The entire exercise shall be completed within the tenure of the Administrator, as extended, and without seeking any further prolongation except for unavoidable and justifiable reasons.

ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಆಡಳಿತಾಧಿಕಾರಿಯವರು ದಿನಾಂಕ:06.02.2026ರಂದು ಸಂಘದ ಪ್ರಭಾರವನ್ನು ವಹಿಸಿಕೊಂಡಿದ್ದು, ಆಡಳಿತಾಧಿಕಾರಿಯವರ ಅವಧಿಯು ದಿನಾಂಕ:15.03.2026ರಂದು ಮುಕ್ತಾಯಗೊಳ್ಳಲಿದ್ದು, ಎಲ್ಲಾ ದಾಖಲಾತಿಗಳನ್ನು ಸಂಘದ ಕಾರ್ಯದರ್ಶಿಯವರಿಂದ ಪಡೆದು ಕ್ರಮವಿಡಬೇಕಾಗಿರುವುದರಿಂದ ಮತ್ತು ಸಂಘದ ಲೆಕ್ಕಪತ್ರಗಳ ಲೆಕ್ಕಪರಿಶೋಧನೆ ನಡೆಸಿ ಸಂಘದ ಮಹಾಸಭೆ ಹಾಗೂ ಆಡಳಿತ ಮಂಡಳಿ ರಚಿಸಲು

ಸಮಯಾವಕಾಶದ ಅಗತ್ಯವಿರುವುದರಿಂದ, ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:15-3-2026 ರಿಂದ ಮುಂದಿನ 06 ತಿಂಗಳಿಗೆ ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:14.03.2026ರಂದು ಮುಕ್ತಾಯಗೊಂಡಿರುವುದರಿಂದ, ಮಾನ್ಯ ನ್ಯಾಯಾಲಯದ ನಿರ್ದೇಶನದಂತೆ ಸಂಘದ ಚುನಾವಣೆ ನಡೆಸಬೇಕಾಗಿರುವ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:15.03.2026 ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 201 ಸಿಎಸ್‌ಆರ್ 2025
ಬೆಂಗಳೂರು, ದಿನಾಂಕ: 06ನೇ ಆಗಸ್ಟ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:15.03.2026 ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಮಾನ್ಯ ನ್ಯಾಯಾಲಯದ ನಿರ್ದೇಶನಗಳನ್ವಯ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ.ಸಿ. ದಿವಾಕರ್.)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ.

PR-314

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹೈದ್ರಾಬಾದ್ ಕರ್ನಾಟಕ ಡೋರ ಕಕ್ಕಯ್ಯ ಸಮಾಜ, ಕಲಬುರಗಿ ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ:ಸಿಒ 238 ಸಿಎಸ್‌ಆರ್ 2024, ದಿನಾಂಕ:19.03.2025.
2. ಸಹಕಾರ ಸಂಘಗಳ ಉಪ ನಿಬಂಧಕರು, ಕಲಬುರಗಿ ಜಿಲ್ಲೆ ಇವರ ಪತ್ರ ಸಂಖ್ಯೆ:ಉನಿಕ:ವಿ-10:ಸಂ.ಸಂ:2025-2026/221, ದಿನಾಂಕ:06.05.2026.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಹೈದ್ರಾಬಾದ್ ಕರ್ನಾಟಕ ಡೋರ ಕಕ್ಕಯ್ಯ ಸಮಾಜ, ಕಮಿಟಿ ಹಾಲ್, ಸುಂದರ ನಗರ, ಸೇಡಂ ರೋಡ್, ಕಲಬುರಗಿ ಈ ಸಂಘಕ್ಕೆ ಸಹಕಾರ ಅಭಿವೃದ್ಧಿ

ಅಧಿಕಾರಿ, ಅಫಜಲಪೂರ ತಾ., ಕಲಬುರಗಿ ಜಿಲ್ಲೆ ಇವರನ್ನು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ-27(ಎ)ರನ್ವಯ ಆಡಳಿತಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಾಂಕ(2)ರ ಪತ್ರದಲ್ಲಿ ಸಂಘದ ನ್ಯೂನತೆಗಳನ್ನು ನಿವಾರಿಸಿ ಪ್ರಭಾರವನ್ನು ಪಡೆದು ಸಂಘದ ಸಾಮಾನ್ಯ ಸಭೆ ಜರುಗಿಸಲು ನೋಟಿಸನ್ನು ಜಾರಿ ಮಾಡಿದ್ದು, ಚುನಾವಣೆಗೆ ರಿಟರ್ನಿಂಗ್ ಅಧಿಕಾರಯನ್ನು ಸಹ ನೇಮಿಸಲಾಗಿದ್ದು, ಆಡಳಿತಾಧಿಕಾರಿಯವರ ಅವಧಿಯು ದಿನಾಂಕ:18.09.2025ರಂದು ಮುಕ್ತಾಯವಾಗಿದ್ದು, ಸಂಘದ ಚುನಾವಣೆ ನಡೆಸಲು ಆಡಳಿತಾದಿಕಾರಿಯವರ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು, ಕಲಬುರಗಿ ಜಿಲ್ಲೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಹೈದ್ರಾಬಾದ್ ಕರ್ನಾಟಕ ಡೋರ ಕಕ್ಕಯ್ಯ ಸಮಾಜ, ಕಮಿಟಿ ಹಾಲ್, ಸುಂದರ ನಗರ, ಸೇಡಂ ರೋಡ್, ಕಲಬುರಗಿ ಈ ಸಂಘದ ಚುನಾವಣೆ ನಡೆಸಲು ಚುನಾವಣಾಧಿಕಾರಿಯನ್ನು ನೇಮಿಸಿರುವುದರಿಂದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:19.09.2025ರಿಂದ 18.03.2026ರವರೆಗೆ ಮತ್ತು ದಿನಾಂಕ:19.03.2026ರಿಂದ ಮುಂದಿನ 6 ತಿಂಗಳವರೆಗೆ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಓ 238 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ:04ನೇ ಆಗಸ್ಟ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೈದ್ರಾಬಾದ್ ಕರ್ನಾಟಕ ಡೋರ ಕಕ್ಕಯ್ಯ ಸಮಾಜ, ಕಮಿಟಿ ಹಾಲ್, ಸುಂದರ ನಗರ, ಸೇಡಂ ರೋಡ್, ಕಲಬುರಗಿ ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:19.09.2025ರಿಂದ 18.03.2026ರವರೆಗೆ ಮತ್ತು ದಿನಾಂಕ:19.03.2026ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಲು ಕ್ರಮವಹಿಸಿ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ.ಸಿ. ದಿವಾಕರ್.)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ

PR-315

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ, ಈ ಸಂಘಕ್ಕೆ ನೇಮಿಸಿರುವ ಆಡಳಿತಾಧಿಕಾರಿಯವರ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ:ಸಿಒ 268 ಸಿಎಸ್ಆರ್ 2025, ದಿನಾಂಕ:08.09.2025.

2. ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿ, ಶಿವಮೊಗ್ಗ ಇವರ ಪತ್ರ ಸಂಖ್ಯೆ:ಡಿಆರ್ಎಸ್/ ಎಸ್ಒಆರ್/ ಆ.ನೇ/ ಸಿಆರ್-41/ 2025-26/ 301, ದಿನಾಂಕ:22.06.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ, (ನೋಂದಣಿ ಸಂಖ್ಯೆ:38:2.10.1973) ಈ ಸಂಘಕ್ಕೆ ತಹಶೀಲ್ದಾರ್, ಕಂದಾಯ ಇಲಾಖೆ, ಭದ್ರಾವತಿ ತಾಲ್ಲೂಕು, ಇವರನ್ನು ಆಡಳಿತಾಧಿಕಾರಿಯನ್ನಾಗಿ ಆರು ತಿಂಗಳ ಅವಧಿಗೆ ನೇಮಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ ಪತ್ರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದಲ್ಲಿ ನೀಡುವ ಮುಂದಿನ ಆದೇಶದಂತೆ ಕ್ರಮವಹಿಸಲು ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:08.03.2026ರಿಂದ ಮುಂದಿನ 06 ತಿಂಗಳವರೆಗೆ ವಿಸ್ತರಿಸುವಂತೆ ಕೋರಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು, ಶಿವಮೊಗ್ಗ ಜಿಲ್ಲೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಿನ್ನೆಲೆಯಲ್ಲಿ ಆಡಳಿತಾಧಿಕಾರಿಯವರ ಅವಧಿಯು ದಿನಾಂಕ:07.03.2026ರಂದು ಮುಕ್ತಾಯಗೊಂಡಿರುವುದರಿಂದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:08.03.2026ರಿಂದ ಅನ್ವಯಿಸುವಂತೆ ಮುಂದಿನ 6 ತಿಂಗಳವರೆಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 268 ಸಿಎಸ್ಆರ್ 2025

ಬೆಂಗಳೂರು, ದಿನಾಂಕ: 07ನೇ ಆಗಸ್ಟ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ, (ನೋಂದಣಿ ಸಂಖ್ಯೆ:38:2.10.1973) ಈ ಸಂಘದ ಆಡಳಿತಾಧಿಕಾರಿಯವರ ಅವಧಿಯನ್ನು ದಿನಾಂಕ:08.03.2026ರಿಂದ ಮುಂದಿನ 6 ತಿಂಗಳವರೆಗೆ ವಿಸ್ತರಿಸಿ ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಆಡಳಿತಾಧಿಕಾರಿಯು ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಲು ಕ್ರಮವಹಿಸಿ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ.ಸಿ. ದಿವಾಕರ್.)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ

PR-316

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU